ಸಂಪುಟ : 10 ಸಂಚಿಕೆ: 30 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 30 Pages : 4+2 Price : 3.00 Friday February 28 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 28 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.


ಸ್ಥಳಗಳ ವಿವರ: ವಾರ್ಡ್ ನಂ. 35 – ಆದರ್ಶ ನಗರ, ನೀಲಮ್ಮ ತಾಯಿ ಮಠ, ಬನ್ನಿ ಗಿಡ, ದೇವರಾಜ್ ಹಾಸ್ಟೆಲ್. ವಾರ್ಡ್ ನಂ. 16, 18, 19 – ಮಡಿವಾಳ ಗುಡಿ, ಕುಂಬಾರ ಓಣಿ 2 ಭಾಗ, ಬಾಗಲಕೋಟಿಯವರ ಲೈನ್, ಹನುಮಂತ ದೇವರ ಗುಡಿ, ಅಂಬೇಡ್ಕರ್ ನಗರ, ಡೋರಗಲ್ಲಿ, ಕೊನೇರಿ ಹೊಂಡ. ವಾರ್ಡ್ ನಂ. 6, 7 – ಪೆಂಡಾರ ಓಣಿ, ಕಿಲ್ಲಾ, ಸಿಹಿ ನೀರಿನ ಬಾವಿ ಸೆಟ್, ಮಲ್ಲೇಶಪ್ಪನ ಲೈನ್, ನಂದರಗಿಯವರ ಲೈನ್, ಗಚ್ಚಿನ ಅವರ ಲೈನ್, ಪಿಂಡಕೋರರ ಲೈನ್, ಒಕ್ಕಲಗೇರಿ, ಯಾತಾಳಿ ಚನ್ನಬಸಪ್ಪನ ಗುಡಿ, ಗಾರ್ಗಿಪೇಟೆ, ಬಚ್ಚಲಕ್ಕಮ್ಮನ ಗುಡಿ, ನದಾಫ್ ಗಲ್ಲಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 22 – ಗಂಗಿಮಡಿ, ಕನ್ನಡ ಶಾಲೆ, ಯಲ್ಲಮ್ಮನ ಗುಡಿ, ಅಪಾರ್ಟ್ಮೆಂಟ್. ವಾರ್ಡ್ ನಂ. 29 – ಹೊಸ ಹುಡ್ಕೋ. ವಾರ್ಡ್ ನಂ. 11, 12 – 16 ನಂಬರ ಶಾಲೆ, ಇರಾನಿ ಕಾಲೋನಿ, ಕರಿಯಮ್ಮ ಕಲ್ಲು, ಚರ್ಚ್, ಹನುಮಂತ ದೇವರ ಗುಡಿ, ಗಣಪತಿ ಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 2 – ಸೆಟ್ಲಮೆಂಟ್, ಹನುಮಂತ ದೇವರ ಗುಡಿ, ಹರಣ ಶಿಕಾರಿ ಓಣಿ, ಸಬ್ ಜೈಲ್, ಹಾಕಿ ಸ್ಟೇಡಿಯಂ ಹಿಂದಿನ ಭಾಗ, ಗಾಂಧಿ ನಗರ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿದ್ದಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಫೆಬ್ರವರಿ 28 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಜಿಲ್ಲೆಯ ಬೆಳಧಡಿಯ ಶ್ರೀ ಬಯಲು ಬಸವೇಶ್ವರ ದೇವಸ್ಥಾನ ಆವರಣದಲ್ಲಿ ಸ್ವಯಂ ಉದ್ಭವ ಶ್ರೀ ಬಯಲು ಬಸವೇಶ್ವರ ದೇವಸ್ಥಾನದ ನೂತನ ತೇರು ಹಾಗೂ ಪ್ರಥಮ ವರ್ಷದ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

**ಕಾಂಗ್ರೆಸ್ ಸರ್ಕಾರದಿಂದ ಮೀಸಲು ಹಣ ದುರ್ಬಳಕೆ | ಜಿಲ್ಲಾ ಬಿಜೆಪಿಯಿಂದ ರಾಜ್ಯಪಾಲರಿಗೆ ದೂರು**

# 'ದಲಿತರ ಮೀಸಲು ನಿಧಿ'ಗೆ ಕನ್ನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ-ಎಸ್.ಟಿ, ಹಿಂದುಳಿದ ವರ್ಗಗಳ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಿಕೊಂಡು ಎಸ್.ಸಿ-ಎಸ್.ಟಿ, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಅನ್ಯಾಯ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಗುರುವಾರ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಿಂದ ಗದಗ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆಯಲ್ಲಿ ತೆರಳಿ ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. 2023ರ ವಿಧಾನಸಭೆಯ ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಹೇಗಾದರೂ ಮಾಡಿ ಅಧಿಕಾರ ಹಿಡಿಯಲು ಐದು ಗ್ಯಾರಂಟಿಗಳನ್ನು ಘೋಷಿಸಿತು. ಆಗ ಕಾಂಗ್ರೆಸ್ ಪಕ್ಷದ ಯಾವ ನಾಯಕರೂ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಖಅಖಕ ಮತ್ತು ಖಖಕ ಹಣ ಬಳಸುವುದಾಗಿ ಹೇಳಿರಲಿಲ್ಲ. ಆದರೆ ಮತದಾರರನ್ನು ಯಾಮಾರಿಸಿ ಚುನಾವಣೆ ಗೆದ್ದ ಕಾಂಗ್ರೆಸ್ ಪಕ್ಷ ಅಧಿಕಾರ ಹಿಡಿದ ತರುವಾಯ 2023ರಲ್ಲಿ ಖಅಖಕಯಿಂದ 7713.15 ಸಾವಿರ ಕೋಟಿ ರೂ ಮತ್ತು ಖಖಕಯಿಂದ 3430.85 ಸಾವಿರ ಕೋಟಿ ರೂ ಹೀಗೆ ಒಟ್ಟಾರೆ 11144.00 ಸಾವಿರ ಕೋಟಿ ರೂಗಳನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ದುರ್ಬಳಕೆ ಮಾಡಿಕೊಂಡಿತು. ಕೆಲವೇ ತಿಂಗಳಲ್ಲಿ ಸರ್ಕಾರ




ಸಂವೇದನೆ ಕಳೆದುಕೊಂಡು ದುರಹಂಕಾರದ ಸ್ಥಿತಿ ತಲುಪಿದೆ. 2024ರಲ್ಲಿ ಸರ್ಕಾರ ಇದೇ ಚಾಳಿಯನ್ನು ಮುಂದುವರೆಸಿತು. ಖಅಖಕ ನಿಧಿಯಿಂದ 9980.66 ಸಾವಿರ ಕೋಟಿ ರೂ ಮತ್ತು ಖಖಕ ನಿಧಿಯಿಂದ 4302.02 ಸಾವಿರ ಕೋಟಿ ರೂ ಒಟ್ಟಾರೆ 14282.68 ಸಾವಿರ ಕೋಟಿ ರೂಗಳನ್ನು ಗ್ಯಾರಂಟಿ ಅನುಷ್ಠಾನಕ್ಕಾಗಿ ದುರ್ಬಳಕೆ ಮಾಡಿತು. ಈಗ ಸರ್ಕಾರ ತಾನು ಮಾಡಿದ್ದೇ ಸರಿ ಎಂದು ವಾದಿಸುತ್ತಿದೆ ಎಂದು ಮನವಿಯ ಮೂಲಕ ವಿವರಿಸಿದ್ದಾರೆ. ನರಗುಂದ ಶಾಸಕ ಸಿ.ಸಿ. ಪಾಟೀಲ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜನಾಂದೋಲನ ರಾಜ್ಯ ತಂಡದ ಉಸ್ತುವಾರಿ ಮಂಜುನಾಥ ಹೂಡಿ, ಎಂ.ಎಸ್. ಕರಿಗೌಡ್ರ, ರವಿ ದಂಡಿನ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಪ್ಪ ಚವ್ಹಾಣ, ಲಿಂಗರಾಜ ಪಾಟೀಲ, ಗದಗ ಜಿಲ್ಲಾ ಎಸ್.ಸಿ. ಮೋರ್ಚಾ ಅಧ್ಯಕ್ಷ ಮಂಜುನಾಥ ಮುಳಗುಂದ, ಎಸ್.ಟಿ. ಮೋರ್ಚಾ ಅಧ್ಯಕ್ಷ ಈಶ್ವರಪ್ಪ ರಂಗಪ್ಪನವರ, ಪ್ರಧಾನ ಕಾರ್ಯದರ್ಶಿಗಳಾದ ವಾಯ್.ಪಿ. ಅಡ್ನೂರ, ಯಲ್ಲಪ್ಪ ಶಿರಿ, ಸುರೇಶ ಚಲವಾದಿ, ಮಲ್ಲಪ್ಪ ಮಾದರ, ಮಂಜುನಾಥ ಕೊಟ್ನಿಕಲ್, ಸಿದ್ದೇಶ ಹೂಗಾರ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ, ಲಕ್ಷ್ಮಣ ದೊಡ್ಮನಿ, ಉಮೇಶಗೌಡ ಪಾಟೀಲ, ಎಂ.ಎಂ. ಹಿರೇಮಠ, ಜಗನ್ನಾಥಸಾ ಭಾಂಡಗೆ, ಶ್ರೀಪತಿ ಉಡುಪಿ, ನವೀನ ಕೊಟೆಕಲ್, ಡಿ.ಬಿ. ಕರಿಗೌಡ್ರ, ಮಹದೇವಪ್ಪ ಚಿಂಚಲಿ, ಮುತ್ತಪ್ಪ ಮೂಲಿಮನಿ, ರವಿ ವಗ್ಗನವರ, ರಾಜು ಹೊಂಗಲ, ವಸಂತ ಮೇಟಿ, ಮಹೇಶ ಮುಸ್ಕಿನಭಾವಿ, ಅಶೋಕ ಕರೂರ, ನಾಗರಾಜ ಕುಲಕರ್ಣಿ, ನಿರ್ಮಲಾ ಕೊಳ್ಳಿ, ಶಾರದಾ ಸಜ್ಜನರ, ಪಾರ್ವತಿ ಪಟ್ಟಣಶೆಟ್ಟಿ, ಸ್ವಾತಿ ಅಕ್ಕಿ, ವಿಜಯಲಕ್ಷ್ಮೀ ಮಾನ್ವಿ, ಪದ್ಮಿನಿ ಮುತ್ತಲದಿನ್ನಿ, ಪಾಟಿಲ, ಕವಿತಾ ಬಂಗಾರಿ, ಶಿವು ಹಿರೇಮನಿಪಾಟೀಲ, ರಾಘವೇಂದ್ರ ಯಳವತ್ತಿ, ಪ್ರಕಾಶ ಅಂಗಡಿ, ಮಾಧುಸಾ ಮೇರವಾಡೆ, ಸುಧೀರ ಕಾಟಿಗರ, ನಾಗರಾಜ ತಳವಾರ ಹಾಗು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗದ ಪ್ರಮುಖರು ಹಾಗು ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.

> ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಲ್ಲಿ ಕೇವಲ ಪರಿಶಿಷ್ಟ ಜಾತಿ, ಪಂಗಡದವರು ಮಾತ್ರ ಇಲ್ಲ. ಸವರ್ಣೀಯರು, ಹಿಂದುಳಿದವರು, ಅಲ್ಪಸಂಖ್ಯಾತರು ಎಲ್ಲರೂ ಇದ್ದಾರೆ. ಉಳಿದವರಿಗೆಲ್ಲ ಸರ್ಕಾರ ತನ್ನ ಖಜಾನೆಯಿಂದ ಹಣ ಕೊಡುತ್ತದೆ. ಆದರೆ ಎಸ್ಸಿ-ಎಸ್ಟಿ ಜನರ 'ದಲಿತರ ಮೀಸಲು ನಿಧಿ'ಗೆ ಕನ್ನ ಹಾಕುತ್ತದೆ ಎಂದರೆ ಇದನ್ನು ಸಾಮಾಜಿಕ ನ್ಯಾಯ ಎನ್ನಲು ಸಾಧ್ಯವೇ ಎಂದು ರಾಜ್ಯಪಾಲರಿಗೆ ಬರೆದ ಪತ್ರದಲ್ಲಿ ಬಿಜೆಪಿ ಪ್ರಶ್ನಿಸಿದೆ.

**ಕಾಂಗ್ರೆಸ್ ಸರ್ಕಾರದಿಂದ ದಲಿತರ ಅಭಿವೃದ್ಧಿ ಹಣ ಲೂಟಿ: ಸಿ.ಸಿ. ಪಾಟೀಲ ವಾಗ್ದಾಳಿ**

# ಸಿಎಂ ಸಿದ್ದರಾಮಯ್ಯ ಅಹಿಂದ ವಿರೋಧಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಿಎಂ ಸಿದ್ದರಾಮಯ್ಯ ಮಾತಿಗೊಮ್ಮೆ ತಾನೊಬ್ಬ ಅಹಿಂದ ನಾಯಕ, ಅಹಿಂದ ವರ್ಗ ಮೇಲೆತ್ತಿದವನು ಎಂದು ಸಾರ್ವಜನಿಕ ಸಭೆ-ಸಮಾರಂಭ, ಅಧಿವೇಶನದಲ್ಲಿ ಹೇಳಿಕೊಂಡು ಓಡಾಡುತ್ತಾರೆ. ಆದರೆ, ಅದೇ ಅಹಿಂದ ವರ್ಗದ ಹಣವನ್ನು ತಮ್ಮ ಗ್ಯಾರಂಟಿ ಯೋಜನೆಗೆ ಬಳಸಿಕೊಳ್ಳುವ ಮೂಲಕ ಅಹಿಂದ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ ಎಂದು ಮಾಜಿ ಲೋಕೋಪಯೋಗಿ ಸಚಿವ, ಹಾಲಿ ನರಗುಂದ ಮತಕ್ಷೇತ್ರದ ಶಾಸಕ ಸಿ.ಸಿ. ಪಾಟೀಲ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದ ಬಾರಿ ಚುನಾವಣೆಯಲ್ಲಿ ಅಧಿಕಾರ ಹಿಡಿಯುವ ಹುಚ್ಚು ಹಂಬಲದಿಂದ ಐದು ಗ್ಯಾರಂಟಿ ಜಾರಿಗೆ ತಂದರು. ಅದರ ಪರಿಣಾಮ ಇಂದು ಅಹಿಂದ ವರ್ಗ ಹಾಗೂ ದಲಿತ ಸಮುದಾಯದ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಸಿಎಂ ಸಿದ್ದರಾಮಯ್ಯ ರಾಜ್ಯದಲ್ಲಿ ಅತೀ ಹೆಚ್ಚು ಬಾರಿ ಬಜೆಟ್ ಮಂಡನೆ ಮಾಡಿದ್ದಾರೆ.




ಆದರೆ, ಗ್ಯಾರಂಟಿ ಘೋಷಣೆ ಮಾಡುವ ಸಂದರ್ಭದಲ್ಲಿ ರಾಜ್ಯದ ಆರ್ಥಿಕ ಸ್ಥಿತಿ-ಗತಿಗಳನ್ನು ಅವಲೋಕಿಸಿ ಗ್ಯಾರಂಟಿ ಘೋಷಣೆಯ ನಿರ್ಧಾರ ಮಾಡಬೇಕಿತ್ತು ಎಂದು ಅಭಿಪ್ರಾಯಪಟ್ಟರು.

ಅಹಿಂದ ವರ್ಗಗಳ ಅನುದಾನವನ್ನು ನಿಲ್ಲಿಸಿ ಗ್ಯಾರಂಟಿ ಯೋಜನೆಗೆ ಬಳಸಿಕೊಳ್ಳುತ್ತಿದ್ದಾರೆ. ಗ್ಯಾರಂಟಿಗಾಗಿ ಎಸ್.ಇ.ಪಿ ಮತ್ತು ಟಿ.ಎಸ್.ಪಿ ಹಣವನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ಕೆ.ಆರ್. ನಾರಾಯಣನ್ ಯೋಜನಾ ಆಯೋಗದ ಉಪಾಧ್ಯಕ್ಷರಾದ ಸಮಯದಲ್ಲಿ ಎಸ್.ಇ.ಪಿ, ಟಿ.ಎಸ್.ಪಿ ಜಾರಿಗೆ ತಂದರು. ಆದರೆ, ಇಂದು ರಾಜ್ಯ ಸರ್ಕಾರ ಆ ಅನುದಾನಕ್ಕೆ ಕೊಕ್ಕೆ ಹಾಕಿದೆ. ಚುನಾವಣೆ ಸಮಯದಲ್ಲಿ ಮಾತ್ರ ಅಹಿಂದ, ದಲಿತರ ಅಭಿವೃದ್ಧಿ ಬಗ್ಗೆ ಮಾತನಾಡುವ ಕಾಂಗ್ರೆಸ್ ಚುನಾವಣೆಯ ನಂತರ ಅವರ ಹಣವನ್ನು ಲೂಟಿ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರಡಗಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಹಿರಿಯ ಮುಖಂಡರಾದ ಎಂ.ಎಸ್. ಕರಿಗೌಡ್ರ, ಮಂಜುನಾಥ ಹೂಡಿ, ಎಂ.ಎಂ. ಹಿರೇಮಠ, ರಮೇಶ್ ಸಜ್ಜಗಾರ, ರಾಜು ಮುಧೋಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ಅಹಿಂದ ಹಾಗೂ ದಲಿತರ ಹಣ ಪೋಲಾಗುತ್ತಿದ್ದರೂ ಸಚಿವ ಪ್ರಿಯಾಂಕ್ ಖರ್ಗೆ, ಸತೀಶ್ ಜಾರಕಿಹೊಳಿ, ಎಚ್.ಸಿ. ಮಹದೇವಪ್ಪನವರು ಬಾಯಿಗೆ ಬೀಗ ಹಾಕಿಕೊಂಡು ಕೂತಿದ್ದಾರೆ. ಮಾರ್ಚ್ 7ರಂದು ಆರಂಭವಾಗುವ ಅಧಿವೇಶನದಲ್ಲಿ ಮತ್ತೆ 15 ಸಾವಿರ ಕೋಟಿ ರೂ ಹಣ ವಾಪಸ್ ಪಡೆಯಲು ಸಂಚು ರೂಪಿಸಿದ್ದಾರೆ. ಯಾವುದೇ ಕಾರಣಕ್ಕೂ ದಲಿತ ಹಾಗೂ ಅಹಿಂದ ವರ್ಗದ ಹಣ ದುರ್ಬಳಕೆಗೆ ಬಿಜೆಪಿ ಅವಕಾಶ ಕೊಡುವುದಿಲ್ಲ. ಸರ್ಕಾರದ ಈ ಸಂಚನ್ನು ತಡೆಯಲು ಬಿಜೆಪಿ ಅಧಿವೇಶನದಲ್ಲಿ ಹೋರಾಟ ಮಾಡುತ್ತದೆ.
>
> **– ಸಿ.ಸಿ. ಪಾಟೀಲ.**
> **ಮಾಜಿ ಸಚಿವರು, ಶಾಸಕರು-ನರಗುಂದ.**

**ಗದುಗಿನಲ್ಲಿ ಮಾರ್ಚ್ 4, 5ರಂದು ಸಂಗೀತ ಪರಂಪರಾ ಉತ್ಸವ: ಡಾ. ಕಲಿಕೇರಿ ಮಾಹಿತಿ**

## ಪಂಚಾಕ್ಷರಿ ಸಂಗೀತ ಪರಂಪರಾ ಉತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಉತ್ಸವ, ಪಂಚಾಕ್ಷರಿ ಗದಗ ಘರಾನಾ ಸಮ್ಮೇಳನ, ಗುರುಕುಮಾರ ಪಂಚಾಕ್ಷರಿ ಸಮ್ಮಾನ-2025 ಕಾರ್ಯಕ್ರಮವು ಮಾರ್ಚ್ 4 ಹಾಗೂ 5ರಂದು ಅಡವೀಂದ್ರ ಸ್ವಾಮಿ ಮಠದಲ್ಲಿ ಜರುಗಲಿದೆ ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೂ ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿಯ ಅಧ್ಯಕ್ಷರೂ ಆದ ಪಂ.ಡಾ. ರಾಜಗುರು ಗುರುಸ್ವಾಮಿ ಕಲಿಕೇರಿ ಹೇಳಿದರು.

ಅವರು ನಗರದ ಅಡವೀಂದ್ರಸ್ವಾಮಿ ಮಠದಲ್ಲಿ ಶಿವಾನುಭವ ಸಮಿತಿ ಹಾಗೂ ಪಂಚಾಕ್ಷರಿ ಸೇವಾ ಸಮಿತಿಯ ಪದಾಧಿಕಾರಿಗಳ ಪೂರ್ವಭಾವಿ ಸಭೆಯಲ್ಲಿ ಕಾರ್ಯಕ್ರಮಗಳ ರೂಪುರೇಷೆಗಳನ್ನು ಅಂತಿಮಗೊಳಿಸಿ ಮಾತನಾಡಿದರು. ಮಾ. 4ರಂದು ಸಂಜೆ 4 ಗಂಟೆಗೆ ರಾಷ್ಟ್ರೀಯ ಪಂಚಾಕ್ಷರ ಘರಾನಾ ಸಮ್ಮೇಳನದ ಉದ್ಘಾಟನಾ ಸಮಾರಂಭ ಜರುಗುವದು. ಗದುಗಿನ ಜ.ಶಿವಾನಂದ ಬ್ರಹನ್ಮಠದ ಪೂಜ್ಯ ಜ.ಸದಾಶಿವಾನಂದ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಹರ್ಲಾಪೂರದ



> ಅಡವೀಂದ್ರಸ್ವಾಮಿ ಮಠದ ಆಶ್ರಯದಲ್ಲಿ 333ನೇ ಶಿವಾನುಭವ, ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಎರಡು ದಿನಗಳವರೆಗೆ ಜರುಗಲಿದ್ದು ನಾಡಿನ ಹೆಸರಾಂತ ಮಠಾಧೀಶರು, ಖ್ಯಾತ ಸಂಗೀತ ಕಲಾವಿದರು ಪಾಲ್ಗೊಳ್ಳುವರು ಎಂದು ಪಂ.ಡಾ. ರಾಜಗುರು ಗುರುಸ್ವಾಮಿ ಕಲಿಕೇರಿ ಮಾಹಿತಿ ನೀಡಿದರು.

ಕೊಟ್ಟೂರೇಶ್ವರ ಮಠದ ಪೂಜ್ಯ ಕೊಟ್ಟೂರೇಶ್ವರ ಮಹಾಸ್ವಾಮಿಗಳು ನೇತೃತ್ವ ವಹಿಸುವರು ಎಂದರು. ಮಾ. 5ರಂದು ಸಂಜೆ 4 ಗಂಟೆಗೆ ಗುರುಕುಮಾರ ಪಂಚಾಕ್ಷರಿ ಸಮ್ಮಾನ ಸಮಾರಂಭ ಜರುಗಲಿದ್ದು, ಸಾನ್ನಿಧ್ಯವನ್ನು ಮುಂಡರಗಿಯ ನಾಡೋಜ ಜ.ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು ವಹಿಸುವರು. ನೇತೃತ್ವವನ್ನು ಹಾವೇರಿ ಹುಕ್ಕೇರಿಮಠದ ಪೂಜ್ಯ ಸದಾಶಿವ ಮಹಾಸ್ವಾಮಿಗಳು ವಹಿಸುವರು. ಖ್ಯಾತ ಗಾಯಕರಾದ ಪದ್ಮಶ್ರೀ ಪಂ. ಎಂ. ವೆಂಕಟೇಶಕುಮಾರ ಸೇರಿದಂತೆ ನಾಡಿನ ಹೆಸರಾಂತ ಗಾಯಕರ ಗಾಯನವಿದ್ದು, ಅಪರೂಪದ ವೈವಿಧ್ಯಮಯ ಈ ಕಾರ್ಯಕ್ರಮಕ್ಕೆ ಸರ್ವರಿಗೂ ಸ್ವಾಗತವಿದೆ ಎಂದು ಕಲಿಕೇರಿ ಹೇಳಿದರು. ಪೂರ್ವಭಾವಿ ಸಭೆಯಲ್ಲಿ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ವೇ.ಮಹೇಶ್ವರಸ್ವಾಮಿಗಳು, ಶಿವಾನುಭವ ಸಮಿತಿಯ ಡಾ. ಎಸ್.ಕೆ. ನಾಲತ್ವಾಡಮಠ, ಪ್ರಧಾನ ಕಾರ್ಯದರ್ಶಿ ಬಿ.ಬಿ. ತೋಟಗೇರ, ಸೇವಾ ಸಮಿತಿಯ ಪದಾಧಿಕಾರಿಗಳಾದ ಮಲ್ಲಯ್ಯ ಶಿರೋಳಮಠ, ಡಾ.ಶಿವಬಸಯ್ಯ ಗಡ್ಡದಮಠ, ಶಿವಲಿಂಗಶಾಸ್ತ್ರಿ ಸಿದ್ದಾಪೂರ ಮುಂತಾದವರಿದ್ದರು.

**ಫಲಪುಷ್ಪ ಪ್ರದರ್ಶನ, ಜಿಲ್ಲಾ ಮಟ್ಟದ ಸರಸ್ ಮೇಳ ಮಾರ್ಚ್ 1ರಿಂದ**

## ವಸ್ತುಗಳ ಪ್ರದರ್ಶನ, ಮಾರಾಟಕ್ಕೆ ವೇದಿಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ, ತೋಟಗಾರಿಕೆ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ಇವರ ಸಹಯೋಗದಲ್ಲಿ ನಗರದ ಕೆ.ಹೆಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಹತ್ತಿರವಿರುವ ವಿ.ಡಿ.ಎಸ್.ಟಿ ಮೈದಾನದಲ್ಲಿ ಮಾರ್ಚ್ 1ರಿಂದ ಮಾರ್ಚ್ 3ರವರೆಗೆ ಫಲಪುಷ್ಪ ಪ್ರದರ್ಶನ ಹಾಗೂ ಜಿಲ್ಲಾ ಮಟ್ಟದ ಸರಸ್ ಮೇಳವನ್ನು ಆಯೋಜಿಸಲಾಗುತ್ತಿದೆ.


ಈ ಕಾರ್ಯಕ್ರಮದಲ್ಲಿ ರೈತರು ಬೆಳೆದ ಹೂವು-ಹಣ್ಣುಗಳ ಪ್ರದರ್ಶನ, ಗ್ರಾಮೀಣ ಪ್ರದೇಶದ ಸ್ವ-ಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ವಿವಿಧ ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದು ಗದಗ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ತಿಳಿಸಿದ್ದಾರೆ.



ಸ್ವ-ಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಬೆಂಬಲ ನೀಡುವ ಉದ್ದೇಶದಿಂದ ಸರಸ್ ಮೇಳವನ್ನು ಆಯೋಜಿಸಲಾಗಿದ್ದು, ಇದರ ಜೊತೆಗೆ ಫಲಪುಷ್ಪ ಪ್ರದರ್ಶನವೂ ಒಂದೇ ಸೂರಿನಡಿ ವ್ಯವಸ್ಥೆಗೊಳಿಸಲಾಗಿರುತ್ತದೆ. ಸರಸ್ ಮೇಳಕ್ಕಾಗಿ 30 ಮಳಿಗೆಗಳನ್ನು ತೆರೆಯಲಾಗಿದೆ. ಗದಗ ಜಿಲ್ಲೆಯ 20 ಹಾಗೂ ಬೇರೆ ಬೇರೆ ಜಿಲ್ಲೆಯ 10 ಸ್ವ-ಸಹಾಯ ಗುಂಪಿನ ಮಹಿಳೆಯರು ತಯಾರಿಸಿರುವ ವಸ್ತುಗಳ ಮಾರಾಟಕ್ಕೂ ವ್ಯವಸ್ಥೆ ಮಾಡಲಾಗಿದೆ.

ಮಾರ್ಚ್ 1ರಂದು ಬೆಳಿಗ್ಗೆ 10 ಗಂಟೆಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ತೋಟಗಾರಿಕೆ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರಾದ ಡಾ. ಶರಣಪ್ರಕಾಶ ರುದ್ರಪ್ಪ ಪಾಟೀಲ, ಸಂಸದರು, ವಿಧಾನಸಭೆ ಹಾಗೂ ವಿಧಾನಪರಿಷತ್ತಿನ ಸದಸ್ಯರು ಹಾಗೂ ವಿವಿಧ ಗಣ್ಯರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿದ್ದಾರೆ.

ಮಳಿಗೆಗಳಲ್ಲಿ ಗ್ರಾಮೀಣ ಸೊಗಡಿನ ತಿಂಡಿ-ತಿನಿಸುಗಳು ಸಹ ಲಭ್ಯವಿದ್ದು, ರೈತರು, ಮಹಿಳೆಯರು ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



> ಬೆಳಗ್ಗೆ 10 ಗಂಟೆಯಿಂದ ಸಂಜೆ 8 ಗಂಟೆಯವರೆಗೆ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದ್ದು, ಐಫೆಲ್ ಟವರ್, ಲಕ್ಕುಂಡಿಯ ಬ್ರಹ್ಮ ಜಿನಾಲಯ ಹಾಗೂ ಸಬರಮತಿ ಆಶ್ರಮದ ಪ್ರತಿಕೃತಿ ಹಾಗೂ ವಿವಿಧ ಬಗೆಯ ಹೂವುಗಳಿಂದ ಹಲವಾರು ರಚನೆಗಳನ್ನು ನಿರ್ಮಿಸಿ ಸಾರ್ವಜನಿಕರ ವೀಕ್ಷಣೆಗೆ ಅನುಕೂಲ ಕಲ್ಪಿಸಲಾಗಿದೆ. ಇದಲ್ಲದೇ, ಸ್ವ-ಸಹಾಯ ಗುಂಪಿನ ಮಹಿಳೆಯರು ಸಿದ್ಧಪಡಿಸಿದ ಕಾಟನ್ ಸೀರೆಗಳು, ಸಿದ್ಧ ಉಡುಪುಗಳು, ಆಟಿಕೆ ಸಾಮಾನು ಇತ್ಯಾದಿಗಳ ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ನೀಡಲಾಗಿದೆ.

ವಿಧಾನಸೌಧದಲ್ಲಿ ಓದುಗರ, ಸಾಹಿತ್ಯಾಸಕ್ತರ ಹಬ್ಬ- ಸದುಪಯೋಗ ಪಡಿಸಿಕೊಳ್ಳಲು ಸಿಎಂ ಸಿದ್ದರಾಮಯ್ಯ ಕರೆ

# ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತದೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪುಸ್ತಕ ಮತ್ತು ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತಿದೆ. ಆದ್ದರಿಂದ ಓದುವ ಅಭ್ಯಾಸ ಹೆಚ್ಚಿಸಿಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ವಿಧಾನಸೌಧದಲ್ಲಿ ಪ್ರಪ್ರಥಮ ಬಾರಿಗೆ ಆಯೋಜಿಸಲಾಗಿರುವ ಪುಸ್ತಕ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಧಾನಸೌಧದಲ್ಲಿ ಓದುಗರ, ಸಾಹಿತ್ಯಾಸಕ್ತರ ಹಬ್ಬ. ಇದನ್ನು ಸಾಹಿತ್ಯಾಸಕ್ತರು ಸದುಪಯೋಗ ಪಡಿಸಿಕೊಳ್ಳಬೇಕು.

ಇನ್ನು ಮುಂದೆ ಪ್ರತಿ ವರ್ಷ ವಿಧಾನಸೌಧದಲ್ಲಿ ಸಾಹಿತ್ಯ, ಪುಸ್ತಕ ಹಬ್ಬ ನಡೆಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಘೋಷಿಸಿದರು.

ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತದೆ.

ಪುಸ್ತಕಗಳನ್ನು ಖರೀದಿಸಿ, ಮನೆ ಮನೆಯಲ್ಲಿ ಗ್ರಂಥಾಲಯ ಮಾಡಿಕೊಳ್ಳಿ. ಮಕ್ಕಳು ಮೊಬೈಲ್ ಮತ್ತು ಡಿಜಿಟಲ್ ಚಟದಿಂದ ಹೊರಗೆ ಬಂದು ಪುಸ್ತಕಗಳನ್ನು ಓದುವ ಹವ್ಯಾಸ, ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಇದೇ ಸಂದರ್ಭದಲ್ಲಿ ಕರೆ ನೀಡಿದರು.



**ಗದಗ:** ಜಿಲ್ಲೆಯ ಮುಂಡರಗಿ ತಾಲೂಕಿನ ಡೋಣಿ ಗ್ರಾಮದಲ್ಲಿ ಶಿವರಾತ್ರಿ ನಿಮಿತ್ತ ಗ್ರಾಮದ ಶ್ರೀ ದುರ್ಗಾದೇವಿ ಜಾತ್ರೆ ನೂರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು. ಡೊಳ್ಳಿನ ಮೇಳ ಹಾಗೂ ಕಲಾ ತಂಡಗಳು ಭಾಗವಹಿಸಿದ್ದವು.


ಫೆ28, ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ನಿಮಿತ್ತ ವಿಶೇಷ ಲೇಖನ

# ವಿಜ್ಞಾನದ ಹೆಮ್ಮೆಯ ಸುದಿನ

ಭಾರತದಲ್ಲಿ ಪ್ರತಿವರ್ಷ ಫೆ.28ರಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತದೆ. ವಿಜ್ಞಾನ ಹಾಗೂ ನಮ್ಮ ಜೀವನದಲ್ಲಿ ವಿಜ್ಞಾನದ ಮಹತ್ವದ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸುವುದು ಈ ದಿನಾಚರಣೆಯ ಮುಖ್ಯ ಉದ್ದೇಶವಾಗಿದೆ.

ನಮ್ಮ ಜ್ಞಾನದ ಅನ್ವೇಷಣೆಯಲ್ಲಿ ವಿಜ್ಞಾನಿಗಳು ಆವಿಷ್ಕಾರದ ಜ್ಯೋತಿಯನ್ನು ಹೊತ್ತಿಸಿದ್ದಾರೆ. ಅದರಲ್ಲಿ ಮುಖ್ಯವಾಗಿ ಭಾರತದ ಹೆಮ್ಮೆಯ ವಿಜ್ಞಾನಿ ಸರ್ ಸಿ.ವಿ. ರಾಮನ್ ಅವರ ಅಪೂರ್ವ, ಅಸಾಮಾನ್ಯ ಮತ್ತು ಅಸಾಧಾರಣ ಸಾಧನೆಯ ಸವಿನೆನಪಿನಲ್ಲಿ ಈ ದಿನವನ್ನು ರಾಷ್ಟ್ರೀಯ ವಿಜ್ಞಾನ ದಿನ ಎಂದು ಆಚರಿಸಲಾಗುತ್ತದೆ. ಅವರು 1928ರ ಫೆಬ್ರುವರಿ 28ರಂದು 'ರಾಮನ್ ಇಫೆಕ್ಟ್' ಎಂದೇ ಪ್ರಸಿದ್ಧವಾದ ತಮ್ಮ ಅಧ್ಯಯನದ ವಿವರಗಳನ್ನು ಜಗತ್ತಿಗೆ ತಿಳಿಸಿದ ಮಹತ್ವದ ದಿನವಾಗಿದೆ.

ವಿಜ್ಞಾನದಲ್ಲಿ ನೊಬೆಲ್ ಪ್ರಶಸ್ತಿ ಪಡೆದ ಏಷ್ಯಾದ ಮೊತ್ತಮೊದಲ ವಿಜ್ಞಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾದ ಸಿ.ವಿ. ರಾಮನ್ ಅವರ ಪೂರ್ಣ ಹೆಸರು ಚಂದ್ರಶೇಖರ ವೆಂಕಟರಾಮನ್. ಅವರು ಜನಿಸಿದ್ದು ತಮಿಳುನಾಡಿನ ತಿರುಚಿನಾಪಳ್ಳಿಯಲ್ಲಿ, 1888ರ ನವೆಂಬರ್ 7ರಂದು. ಅವರ ತಂದೆ ಚಂದ್ರಶೇಖರ ಅಯ್ಯರ್ ಗಣಿತ ಹಾಗೂ ಭೌತವಿಜ್ಞಾನದ ಶಿಕ್ಷಕರಾಗಿದ್ದರು. ಅಂದಿನ ಮದರಾಸಿನ ಪ್ರೆಸಿಡೆನ್ಸಿ ಕಾಲೇಜಿನಲ್ಲಿ ತಮ್ಮ ಶಿಕ್ಷಣ ಮುಗಿಸಿದ ರಾಮನ್, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉನ್ನತ ಸ್ಥಾನ ಗಳಿಸುವ ಮೂಲಕ ಕಲ್ಕತ್ತೆಯಲ್ಲಿ ಅಸಿಸ್ಟೆಂಟ್ ಅಕೌಂಟೆಂಟ್ ಜನರಲ್ ಆಗಿ ನೇಮಕಗೊಂಡರು.




ಸರಕಾರದಲ್ಲಿ ಉನ್ನತ ಅಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದರೂ ಅವರಲ್ಲಿ ವಿಜ್ಞಾನದ ಕಡೆಗಿನ ತುಡಿತ ಹಾಗೆಯೇ ಉಳಿದಿತ್ತು. ಅದರ ಪರಿಣಾಮವಾಗಿ ಅವರು ತಮ್ಮ ಹುದ್ದೆಯನ್ನು ತ್ಯಜಿಸಿ ಕಲ್ಕತ್ತಾ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದರು, ಮುಂದೆ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ನಿರ್ದೇಶಕರಾಗಿ ಬೆಂಗಳೂರಿಗೆ ಬಂದವರು ತಮ್ಮ ಕೊನೆಯ ಉಸಿರಿನ ತನಕ ವಿವಿಧ ಸಂಶೋಧನೆಗಳಲ್ಲಿ ಮಗ್ನರಾಗಿದ್ದರು.

ಭಾರತದಲ್ಲಿ ವಿಜ್ಞಾನಕ್ಕೆ ಸಂಬಂಧಿಸಿದ ಸಂಶೋಧನೆ ಪ್ರಾಚೀನ ಕಾಲದಿಂದಲೂ ಪರಿಚಿತವಾದ ಕ್ಷೇತ್ರವೇ ಆಗಿದೆ. ಪಾಶ್ಚಾತ್ಯರ ಸಂಪರ್ಕದಿಂದ ಅದರ ಹೆಸರು, ವಿಮರ್ಶೆ ಇತ್ಯಾದಿಗಳು ಬೇರೆ ಬೇರೆ ದೃಷ್ಟಿಕೋನಗಳಲ್ಲಿ ಬೆಳಕಿಗೆ ಬಂದಿರಬಹುದು. ಆದರೆ ಆ ದಿಸೆಯಲ್ಲಿ ಪ್ರಾಚೀನ ಭಾರತದ ಋಷಿ ಮುನಿಗಳ ಕಾಲದಿಂದಲೂ ವಿಜ್ಞಾನವು ಅಗ್ರಸ್ಥಾನದಲ್ಲಿದೆ ಎಂದು ಹೇಳಬಹುದು. ಆ ಕೀರ್ತಿ ಈಗಲೂ ಕೆಲವು ಕ್ಷೇತ್ರಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಉಳಿದುಕೊಂಡಿದೆ.

ಕಳೆದ ಕೆಲವು ದಶಕಗಳಲ್ಲಿ ಭಾರತದ ವಿಜ್ಞಾನ ಕ್ಷೇತ್ರವು ಅಪಾರ ವೇಗದಿಂದ ಔನತ್ಯದೆಡೆಗೆ ಮುನ್ನಡೆಯುತ್ತಿದ್ದು, ಇದರ ಹಿಂದಿರುವ ಕಾರಣ ಇಲ್ಲಿ ಯಥೇಚ್ಛವಾಗಿ ಲಭ್ಯವಿರುವ ಪ್ರತಿಭೆ ಮತ್ತು ಮೂಲಭೂತ ಸೌಕರ್ಯ. ಖಗೋಳಶಾಸ್ತ್ರದಿಂದ ಮೊದಲ್ಗೊಂಡು ಜೀವಶಾಸ್ತ್ರದವರೆಗೂ, ರಸಾಯನಶಾಸ್ತ್ರದಿಂದ ಕೃಷಿಯವರೆಗೂ ಎಲ್ಲಾ ವೈಜ್ಞಾನಿಕ ಕ್ಷೇತ್ರಗಳನ್ನೂ ಒಳಗೊಂಡಂತೆ ಹೆಮ್ಮೆ ಪಡಬೇಕಾದ ಹಲವಾರು ಸಾಧನೆಗಳು, ಅದರ ಹಿಂದಿನ ವಿಜ್ಞಾನಿಗಳು ಇಲ್ಲಿರುವುದು ಸಂತಸದ ಸತ್ಯ.

1986ರಲ್ಲಿ ನ್ಯಾಷನಲ್ ಕೌನ್ಸಿಲ್ ಫಾರ್ ಸೈನ್ಸ್ ಅಂಡ್ ಟೆಕ್ನಾಲಜಿ ಕಮ್ಯುನಿಕೇಷನ್ (ಎನ್‌ಸಿಎಸ್‌ಟಿಸಿ) ಭಾರತ ಸರ್ಕಾರಕ್ಕೆ ಫೆಬ್ರವರಿ 28ರಂದು ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಆಚರಿಸಲು ಮನವಿಯನ್ನು ಸಲ್ಲಿಸಿತ್ತು. ಎನ್‌ಸಿಎಸ್‌ಟಿಸಿಯ ಮನವಿಯನ್ನು ಒಪ್ಪಿದ ಅಂದಿನ ಸರ್ಕಾರ ಪ್ರತಿ ವರ್ಷ ಫೆ.28ನ್ನು ರಾಷ್ಟ್ರೀಯ ದಿನವನ್ನಾಗಿ ದೇಶಾದ್ಯಂತ ಆಚರಿಸುವಂತೆ ಘೋಷಿಸಿತು.

ಕೋಲ್ಕತಾದ ಇಂಡಿಯನ್ ಅಸೋಸಿಯೇಷನ್ ಫಾರ್ ಕಲ್ಟಿವೇಷನ್ ಆಫ್ ಸೈನ್ಸ್‌ನಲ್ಲಿ ರಾಮನ್ ಅವರು ತಮ್ಮ ಸಹುದ್ಯೋಗಿಗಳೊಡನೆ ನಡೆಸಿದ ಅಧ್ಯಯನಗಳ ಪರಿಣಾಮವೇ ರಾಮನ್ ಪರಿಣಾಮದ ಶೋಧ. ಇದೇ ಸಾಧನೆಗಾಗಿ ಅವರಿಗೆ 1930ನೇ ಇಸವಿಯಲ್ಲಿ ನೊಬೆಲ್ ಪುರಸ್ಕಾರ ನೀಡಿ ಗೌರವಿಸಲಾಯಿತು. ಇದು ವಿಜ್ಞಾನ ಕ್ಷೇತ್ರದಲ್ಲಿ ಭಾರತಕ್ಕೆ ದೊರೆತ ಮೊತ್ತಮೊದಲ ನೊಬೆಲ್ ಪುರಸ್ಕಾರವೂ ಹೌದು.

ಒಟ್ಟಾರೆಯಾಗಿ ಈ ಆಚರಣೆಯು ಭವಿಷ್ಯದ ಪೀಳಿಗೆಗೆ ಅವರ ಕನಸುಗಳನ್ನು ಮುಂದುವರಿಸಲು ಭರವಸೆ ಮತ್ತು ಸ್ಫೂರ್ತಿಯನ್ನು ನೀಡುವ ಮೂಲಕ ಸಂಶೋಧನೆ ಮತ್ತು ಆವಿಷ್ಕಾರಕ್ಕೆ ಸರ್ ಸಿ.ವಿ. ರಾಮನ್ ಅವರ ಅಸಾಧಾರಣ ಕೊಡುಗೆಯನ್ನು ಗೌರವಿಸುತ್ತ ನೆನೆಯುವುದು. ಯಾವುದೇ ಕ್ಷೇತ್ರದಲ್ಲಿ ಕೇವಲ ಒಂದು ಆವಿಷ್ಕಾರದೊಂದಿಗೆ ನಿಲ್ಲುವುದಿಲ್ಲ, ಆದರೆ ಎಲ್ಲಾ ರೀತಿಯಲ್ಲಿ ರಾಷ್ಟ್ರದ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಮೇಲೆ ಬರಬೇಕಾದರೆ ಹಲವು ಬಗೆಯ ಅತ್ಯಾಧುನಿಕ ತಂತ್ರಜ್ಞಾನ ಹೊಂದುವುದಾಗಿದೆ.

ದೇಶದ ಅಭಿವೃದ್ಧಿ ಸಾಧನೆಗೆ ನೆರವಾಗಿ ಸಾಧಿಸಬೇಕಾದುದು ಇನ್ನೂ ಎಷ್ಟೋ ಇವೆ ಎಂದು ಮನವರಿಕೆ ಮಾಡಿಕೊಡುವ ನಮ್ಮ ಪ್ರಯೋಗಗಳು, ಸಂಶೋಧನೆಗಳು ಜನಸಾಮಾನ್ಯರನ್ನು ತಲುಪುವುದು ಅತಿ ಮುಖ್ಯವಾಗಿದೆ. ಸಾಮಾನ್ಯ ಜನರ ಜೀವನ ಸುಖಮಯವಾಗಿ ಅವರ ಬದುಕು ಹಸನು ಮಾಡುವುದೇ ವೈಜ್ಞಾನಿಕ ಮತ್ತು ತಂತ್ರಜ್ಞಾನದ ಮೂಲ ಉದ್ದೇಶವಾಗಿದೆ. ಎಲ್ಲಾ ರಾಷ್ಟ್ರಗಳೂ ಇದನ್ನು ಮನಗಂಡಾಗ ಪ್ರಪಂಚ ಶಾಂತಿಯ ನಿಟ್ಟುಸಿರು ಬಿಡಲು ಸಾಧ್ಯ.



– **ಬಸವರಾಜ ಎಮ್. ಯರಗುಪ್ಪಿ.**
**ಬಿಆರ್‌ಪಿ ಶಿರಹಟ್ಟಿ-ಲಕ್ಷ್ಮೇಶ್ವರ.**

# ಕಠಿಣ ಶ್ರಮವಹಿಸಿ ಅಭ್ಯಾಸ ಮಾಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಿದ್ದರೆ ಅವರ ಪ್ರಾಥಮಿಕ ಶಿಕ್ಷಣದ ತಳಪಾಯ ಗಟ್ಟಿಯಾಗಿರಬೇಕು. ವಿದ್ಯಾರ್ಥಿಗಳು ಕಠಿಣ ಶ್ರಮವಹಿಸಿ ಅಭ್ಯಾಸ ಮಾಡಬೇಕು. ಅದಕ್ಕೆ ತಕ್ಕ ಪ್ರತಿಫಲ ಸಿಗುತ್ತದೆ ಎಂದು ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ ಹೇಳಿದರು.

ಅವರು ತಾಲೂಕಿನ ಹಂಗನಕಟ್ಟಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ದ್ವಿತೀಯ ವರ್ಷದ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಮಾತನಾಡುತ್ತ, ಮಕ್ಕಳು ಮೊಬೈಲ್‌ನಿಂದ ದೂರವಿದ್ದು, ಅಭ್ಯಾಸ ಮತ್ತು ಪಠ್ಯೇತರ ಚಟುವಟಿಕೆಗಳ ಕಡೆ ಗಮನ ಕೊಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಮ್‌ಸಿ ಅಧ್ಯಕ್ಷ ಶರಣಪ್ಪ ಕಿತ್ತಿ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವ್ಹಿ.ಎಮ್. ಹಿರೇಮಠ ಮಾತನಾಡಿದರು. ಈ ಸಂದರ್ಭದಲ್ಲಿ ಕ.ರಾ.ಸ.ನೌ ಸಂಘದ ಜಿಲ್ಲಾ ಪ್ರ.ಕಾರ್ಯದರ್ಶಿ ಕೆ.ಬಿ. ಕೊಣ್ಣೂರ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕು ಕಾರ್ಯದರ್ಶಿ ಎನ್. ಎಚ್.ಪಿ ಈರಪ್ಪ, ಎಫ್.ಎಸ್. ಗಾಣಗೇರ, ಸೊರಟೂರ ಕ್ಲಸ್ಟರಿನ ಸಂಪನ್ಮೂಲ ವ್ಯಕ್ತಿ ಕೆ.ಬಿ. ಕಾತರಕಿ, ನಿವೃತ್ತ ಶಿಕ್ಷಕ ಬಿ.ವಿ. ಪಾಟೀಲ್, ಎಚ್.ಎಮ್. ಪಲ್ಲೇದ, ವಿ.ಎಮ್. ಪೂಜಾರ, ಎಸ್.ಎಚ್. ಪಾಟೀಲ್, ಪಿ.ಎನ್. ಕಾಳೆ, ವಿ.ಎಂ. ಪಾಟೀಲ್, ಈಶ್ವರಪ್ಪ ಗದ್ದಿ, ಉದಯಕುಮಾರ ಗದ್ದಿ, ಮಹಾಲಿಂಗಪ್ಪ ಛಬ್ಬಿ, ಗ್ರಾ.ಪಂ ಸದಸ್ಯರಾದ ಗಂಗಮ್ಮ ಗಂಟಿ, ಬಸವರಾಜ ಖಾನಾಪುರ, ಹಿರಿಯರಾದ ಪ್ರಭಯ್ಯ ಹಿರೇಮಠ, ಈರಣ್ಣ ಗದ್ದಿ, ಎಸ್‌ಡಿಎಮ್‌ಸಿ ಸರ್ವ ಸದಸ್ಯರು ಇದ್ದರು.

ಪ್ರಧಾನ ಗುರುಗಳಾದ ಎಚ್.ವೈ. ಕೊಂಡಿಕೊಪ್ಪ ಸ್ವಾಗತಿಸಿದರು. ಅರವಿಂದ ತಳವಾರ, ಕವಿತಾ ಬಾಗೇವಾಡಿ, ಬಸವರಾಜ ಹೇಳವಿ ನಿರುಪಿಸಿದರು. ಎಮ್.ಜಿ. ರಾಠೋಡ ವಂದಿಸಿದರು.

# ಮಾ.1,2ರಂದು ಗದಗ ಜಿಲ್ಲಾ ಮಟ್ಟದ ಉದ್ಯೋಗ ಮೇಳ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕೌಶಲ್ಯಾಭಿವೃದ್ಧಿ , ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ಇವರ ಸಹಯೋಗದೊಂದಿಗೆ ಸಂಕಲ್ಪ ಯೋಜನೆಯಡಿ ಗದಗ ಜಿಲ್ಲಾ ಮಟ್ಟದ ಉದ್ಯೋಗ ಮೇಳ –2025ನ್ನು ಮಾರ್ಚ್ 1 ಮತ್ತು 2 ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಉದ್ಘಾಟನಾ ಸಮಾರಂಭವು ಮಾರ್ಚ್ 1 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ರುದ್ರಪ್ಪ ಪಾಟೀಲ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಗದಗ–ಹಾವೇರಿ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯಕ್, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕಾರ್ಯದರ್ಶಿ ಡಾ.ಏಕರೂಪ್ ಕೌರ್ , ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರು ಹಾಗೂ ಕೌಶಲ್ಯಾಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ.ರಾಗಪ್ರಿಯ ಆರ್, ಆಗಮಿಸುವರು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿ.ಪಂ. ಯೋಜನಾ ನಿರ್ದೇಶಕ ಎಂ.ವಿ.ಚಳಗೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ.ಮಲ್ಲೂರ ಬಸವರಾಜ ಸ್ವಾಗತ ಕೋರಿದ್ದಾರೆ.

ಇಂದು 'ರಾಷ್ಟ್ರೀಯ ವಿಜ್ಞಾನ ದಿನಾಚರಣೆ'ಯ ನಿಮಿತ್ತ ವಿಶೇಷ ಲೇಖನ

# ವಿಕಸಿತ ಭಾರತಕ್ಕೆ ಯುವಕರೇ ಬೆನ್ನೆಲುಬು

ನಮಗೆ ಅನ್ನ, ನೀರು, ಸಂಸ್ಕಾರ ಕೊಟ್ಟ ದೇಶದ ಬಗ್ಗೆ ಗೌರವ ಮತ್ತು ಅಭಿಮಾನ ಇರಬೇಕಾದುದು ನಮ್ಮೆಲ್ಲರ ನಾಗರಿಕ ಗುಣ. ನನಗೆಲ್ಲವನ್ನೂ ಕೊಟ್ಟ ನನ್ನ ಭಾರತ ವಿಶ್ವಕ್ಕೆ ಕೀರಿಟವಾಗಬೇಕು ಹಾಗೂ ವಿಶ್ವಗುರುವಾಗಬೇಕು ಎಂಬ ಗುರಿಯನ್ನು ನಾವು ಯುವ ಜನತೆಯಲ್ಲಿ ತುಂಬಿದಾಗ ಮಾತ್ರ ನಮ್ಮ ಭಾರತ 2047ರ ಹೊತ್ತಿಗೆ ವಿಕಸಿತ ಭಾರತವಾಗಬಲ್ಲದು.

ಈ ಮೇಲಿನ ಆಶಯಗಳನ್ನು ನಾವು ಇಂದಿನಿಂದಲೇ ಪ್ರಾರಂಭಿಸಿದರೆ ಭಾರತದ ಕನಸು ನನಸಾಗಲು ಸಾಧ್ಯ. ಇಂದು ವಿಜ್ಞಾನ ಎಂದರೆ ಕೇವಲ ದೂರದರ್ಶನ, ಮೊಬೈಲ್, ಕಂಪ್ಯೂಟರ್ ಹಾಗೂ ಕೃತಕ ಬುದ್ಧಿಮತ್ತೆಯನ್ನು ಸೃಷ್ಟಿಸುವದು ಎಂಬಂತಾಗಿದೆ. ಆದರೆ ಈ ಎಲ್ಲ ಅಧುನಿಕ ಯಂತ್ರಗಳಿಗೆ ಪ್ರಮುಖವಾದ ಶಕ್ತಿಯ ಮೂಲ ನಮ್ಮ ರಾಷ್ಟ್ರದ ಯುವ ಶಕ್ತಿಯನ್ನೆ ನಾವು ಅಲಕ್ಷಿಸುತ್ತಿದ್ದೇವೆ. ಇದೇ ಭರತಖಂಡದಲ್ಲಿ 7ನೇ ನವೆಂಬರ್ 1888ರಲ್ಲಿ ತಮಿಳುನಾಡಿನ ತಂಜಾವುರು ಜಿಲ್ಲೆಯ ತಿರುವೈನಾಕಾವಲ್ ಎಂಬಲ್ಲಿ ಒಂದು ಸುಸಂಸ್ಕೃತ ಬ್ರಾಹ್ಮಣ ದಂಪತಿಗಳ ಮಗನಾಗಿ ಜನಿಸಿದವರೇ ಸರ್ ಸಿ.ವಿ. ರಾಮನ್.

ಇವರು ಹುಟ್ಟಿನಿಂದಲೇ ಪ್ರತಿಭಾವಂತರು. 18 ವರ್ಷದವರಿರುವಾಗಲೇ ಒಂ.,ಈ.ಅ.ಖ ಸ್ನಾತಕೊತ್ತರ ಪದವಿಯನ್ನು ಮುಗಿಸಿ ವೈವಾಹಿಕ



ಜೀವನದೊಂದಿಗೆ ಕಲ್ಕತ್ತಾ, ರಂಗೂನ ಹಾಗೂ ನಾಗಪೂರಗಳಲ್ಲಿ ವಿತ್ತಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವಾಗಲೂ ವಿಜ್ಞಾನವು ಅವರನ್ನು ಕೆಣಕುತ್ತಿತ್ತು. ನಂತರ ಕಲ್ಕತ್ತಾ ವಿಶ್ವವಿದ್ಯಾಲಯದಲ್ಲಿ ಭೌತಶಾಸ್ತ್ರ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿರುವಾಗಿ ಆಕಾಶವೇಕೆ ನೀಲಿ, ಸಮುದ್ರವೇಕೆ ನೀಲಿ ಎಂಬ ಜಿಜ್ಞಾಸೆ ಅವರನ್ನು 'ರಾಮನ್ ಎಫೆಕ್ಟ್ ಅಥವಾ ರಾಮನ್ ಪರಿಣಾಮ'ವನ್ನು ಸಂಶೋಧಿಸಲು ಪ್ರಚೋದಿಸಿತು.

ಇದೇ ರಾಮನ್ ಪರಿಣಾಮಕ್ಕೆ 11ನೇ ಡಿಸೆಂಬರ್ 1930ರಂದು ರಾಮನ್‌ರಿಗೆ ನೊಬೆಲ್ ಪಾರಿತೋಷಕ ದೊರೆಯಿತು. ಇದು ಭಾರತಕ್ಕೆ ಒದಗಿದ ಮೊಟ್ಟ ಮೊದಲ ವಿಜ್ಞಾನಕ್ಷೇತ್ರದ ನೊಬೆಲ್ ಪಾರಿತೋಷಕವಾಗಿದೆ. ರಾಷ್ಟ್ರೀಯ ವಿಜ್ಞಾನ ದಿನಚರಣೆಯಂದು, ರಾಷ್ಟೀಯ–ಅಂತಾರಾಷ್ಟ್ರೀಯ ವೈಜ್ಞಾನಿಕ ಅವಿಷ್ಕಾರಗಳನ್ನು ಪ್ರತಿಯೊಬ್ಬ ಭಾರತೀಯ ತಿಳಿದುಕೊಳ್ಳುವಂತೆ ವಾಡುವುದಕ್ಕಾಗಿ ಕಾರ್ಯಕ್ರಮಗಳನ್ನು ರಾಷ್ಟ್ರೀಯ ವಿಜ್ಞಾನ ಮತ್ತುತಂತ್ರಜ್ಞಾನ ಸಂವಹನ ಮಂಡಳಿ (ಓಅಖಿಅ) ಆಯೋಜಿಸುತ್ತದೆ.

ಈ ಎಲ್ಲ ಅಂಶಗಳನ್ನು ಮನದಲ್ಲಿಟ್ಟುಕೊಂಡು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಭಾರತದಾದ್ಯಂತ ಕಡ್ಡಾಯಗೊಳಿಸಿದಾಗ, ಶಾಲಾ ಶಿಕ್ಷಣ, ಕಾಲೇಜು ಶಿಕ್ಷಣ, ಸ್ನಾತಕೋತ್ತರ ಶಿಕ್ಷಣದಲ್ಲಿ ವಿಶೇಶವಾಗಿ ವಿಜ್ಞಾನ ವಿದ್ಯಾರ್ಥಿಗಳಿಗೆ ವಿಕಸಿತ ಭಾರತದ ಆಶೋತ್ತರಗಳನ್ನು ಈಡೇರಿ ಸುವಂತೆ ಪ್ರೇರಣೆ ನೀಡಿದಾಗ, 2047ಕ್ಕೆ ನಮ್ಮ ಭಾರತ ವಿಶ್ವಗುರುವಾಗುವುದರಲ್ಲಿ ಸಂದೇಹವಿಲ್ಲ. ಎಲ್ಲರೂ ಈ ದಿಶೆಯಲ್ಲಿ ಮುನ್ನಡೆಯುವಾ ಎಂದು ಹಾರೈಸುತ್ತೇನೆ.



– **ರಾಮಚಂದ್ರ ಮೋನೆ.**
ನಿವೃತ್ತ ವಿಜ್ಞಾನ ಶಿಕ್ಷಕರು–ಗದಗ.

ಗ್ರಾ.ಪಂ ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಿದ ಕಾಮಗಾರಿಗಳನ್ನು ಪರಿಶೀಲಿಸಿದ ಜಿ.ಪಂ ಸಿಇಓ ಭರತ್


# ವಿದ್ಯಾರ್ಥಿಗಳಿಗೆ ಶುಚಿ–ರುಚಿ ಆಹಾರ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಗುರುವಾರ ವಿವಿಧ ಯೋಜನೆಗಳ ಅನುದಾನದಲ್ಲಿ ತಾಲೂಕಿನ ಗ್ರಾ.ಪಂ ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಿದ ಕಾಮಗಾರಿಗಳನ್ನು ಪರಿಶೀಲಿಸಿದರು.

ಜಿ.ಪಂ ಮತ್ತು ತಾ.ಪಂ ಅನಿರ್ಬಂಧಿತ ಅನುದಾನದಲ್ಲಿ ಲಕ್ಷ್ಮೇಶ್ವರ ಪಟ್ಟಣದ ದೇವರಾಜ ಅರಸು ವಸತಿ ನಿಲಯದಲ್ಲಿ ಗ್ರಂಥಾಲಯ ಕಟ್ಟಡ, ಒಡೆಯರ ಮಲ್ಲಾಪುರದ ಮೊರಾರ್ಜಿ ವಸತಿ ಶಾಲೆಯಲ್ಲಿ ಶೌಚಾಲಯಗಳ ನವೀಕರಣ, ಆರ್‌ಓ ಘಟಕ ವಿಕ್ಷೀಸಿದರು. ಶಿಗ್ಲಿ ಗ್ರಾಮದಲ್ಲಿಯ ಪದವಿಪೂರ್ವ ಬಾಲಕಿಯರ ವಸತಿ ನಿಲಯದಲ್ಲಿ ಗಣಕಯಂತ್ರಗಳ ಪೂರೈಕೆ ಹಾಗೂ ಶೌಚಾಲಯ ನವೀಕರಣ ಕಾಮಗಾರಿ, ಶಿಗ್ಲಿ ಗ್ರಾ.ಪಂ ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿ ಪರಿಶೀಲಿಸಿದರು.

ಶಿಗ್ಲಿ ಗ್ರಾಮದಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ಮಿಸಲಾದ ಸಿ.ಸಿ. ರಸ್ತೆ ಕಾಮಗಾರಿಗಳ ಸ್ಥಳ ಮತ್ತು ಕಡತಗಳನ್ನು ಪರಿಶೀಲನೆ ಮಾಡಿದರು. ಎಫ್‌ಟಿಓ ಸೃಜನೆ




ಮಾಡುವಾಗ ಎಂಬಿ ಪುಸ್ತಕದಲ್ಲಿ ದಾಖಲಿಸಿರುವ ಮೊತ್ತವನ್ನೇ ದಾಖಲಿಸಿ ಎಂಐಎಸ್ ಮಾಡುವಂತೆ ಸೂಚಿಸಿದರು. ಕಾಮಗಾರಿ ಕಡತದಲ್ಲಿ ದರಪಟ್ಟಿ ಆಹ್ವಾನ ಮತ್ತು ಪತ್ರಿಕಾ ಪ್ರಕಟಣೆಯ ದಾಖಲೆ ಇರುವಂತೆ ನೋಡಿಕೊಳ್ಳಲು ಸೂಚಿಸಿದರು.

ದೊಡ್ಡೂರ ಗ್ರಾ.ಪಂ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಗ್ರಾ.ಪಂ ಕಟ್ಟಡ, ಶಾಲಾ ಶೌಚಾಲಯ, ಸಿ.ಸಿ. ಗಟಾರ, ಸಿ.ಸಿ. ರಸ್ತೆ ಮತ್ತು ಸೂರಣಗಿ ಪಂಚಾಯಿತಿ ವ್ಯಾಪ್ತಿಯ ಸುರ್ವಣಗಿರಿ ತಾಂಡಾದಲ್ಲಿ ಅಂಗನವಾಡಿಗೆ ಶೌಚಾಲಯ ಮತ್ತು ಸುಣ್ಣ–ಬಣ್ಣ ಹಚ್ಚಿದ ಕಾಮಗಾರಿ, ನರೇಗಾ ಯೋಜನೆಯ ಸಿ.ಡಿ. ನಿರ್ಮಾಣ ಕಾಮಗಾರಿ ಮತ್ತು ಎನ್‌ಆರ್‌ಎಲ್‌ಎಂ ಕಟ್ಟಡ ಕಾಮಗಾರಿ ಪರಿವೀಕ್ಷಣೆ ಮಾಡಿದರು.

ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಲಭ್ಯವಾಗುವ ಸೌಲಭ್ಯಗಳನ್ನು ನಿಯಮಾನುಸಾರ ವಿತರಣೆ ಮಾಡಬೇಕು ಎಂದು ಹಾಸ್ಟೆಲ್ ಸಿಬ್ಬಂದಿಗೆ ಸೂಚನೆ ನೀಡಿದರು. ವಿದ್ಯಾರ್ಥಿ ನಿಲಯ ಆವರಣದಲ್ಲಿ ಸ್ವಚ್ಛತೆ ಕಾಪಾಡಬೇಕು. ಅಡುಗೆ ಕೋಣೆಯನ್ನು ಸದಾ ಸ್ವಚ್ಛವಾಗಿರಿಸಬೇಕು. ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಸಾಕಷ್ಟು ಅನುದಾನ ಬಿಡುಗಡೆಯಾಗುತ್ತಿದ್ದು, ಉತ್ತಮವಾದ ಶುಚಿ–ರುಚಿಯಾದ ಆಹಾರ ಒದಗಿಸಬೇಕು ಎಂದು ಹಾಸ್ಟೆಲ್ ವಾರ್ಡನ್‌ಗಳಿಗೆ ಸಿಇಓ ಭರತ್ ಎಸ್ ತಿಳಿಸಿದರು.

ಈ ಸಂದರ್ಭದಲ್ಲಿ ಲಕ್ಷ್ಮೇಶ್ವರ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳಾದ ಶಿವಕುಮಾರ ವಾಲಿ, ರವಿ ಕೊರಕನವರ, ಜಿ.ಎಂ. ರೋಣದ, ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಆಧ್ಯಾತ್ಮಿಕ ಚಿಂತನ-ಮಂಥನ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಎಲ್ಲರಿಗೂ ಶಾಂತಿ-ನೆಮ್ಮದಿ, ಉತ್ತಮ ಸಂಸ್ಕಾರ, ಉತ್ತಮ ಆರೋಗ್ಯ ಲಭಿಸಬೇಕಾದರೆ ಆಧ್ಯಾತ್ಮಿಕ ಚಿಂತನ-ಮಂಥನ ಮೈಗೂಡಿಸಿಕೊಳ್ಳಬೇಕು. ಇದರಿಂದ ಧನಾತ್ಮಕ ವಿಚಾರಗಳು ಉತ್ಪತ್ತಿಯಾಗುತ್ತವೆ ಎಂದು ಗದಗ ಸಿಪಿಐ ಪರಮೇಶ ಕವಟಗಿ ಹೇಳಿದರು.

ಅವರು ಪಟ್ಟಣದ ಸಮೀಪದ ನೀಲಗುಂದ ಗ್ರಾಮದ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶಿವರಾತ್ರಿ ಉತ್ಸವ ಜಾಗರಣೆ ಸಮಾರಂಭದಲ್ಲಿ ಮಾತನಾಡಿ, ಆಧ್ಯಾತ್ಮಿಕ ಚಿಂತನೆಗಳನ್ನು ಆಲಿಸುವುದರಿಂದ ಬದುಕಿನ ಅರ್ಥ ತಿಳಿಯುತ್ತದೆ. ಸಂತರು, ಶರಣರು ತಮ್ಮ ಬದುಕಿನುದ್ದಕ್ಕೂ ನುಡಿದಂತೆ ನಡೆದವರು. ಆ ಹಾದಿಯಲ್ಲಿ ಪ್ರಭುಲಿಂಗ ದೇವರು ಶಾಲೆಗಳನ್ನು ತೆರೆಯುವ ಮೂಲಕ ಗ್ರಾಮೀಣ ಮಟ್ಟದ ಬಡ ಮಕ್ಕಳಿಗೆ ಆಶಾ ಕಿರಣವಾಗಿ ನಿಂತಿರುವುದು ಶ್ಲಾಘನೀಯ ಎಂದರು.

ದ್ರಾಕ್ಷಾಯಣಿ ಅಳವಂಡಿ ಮಾತನಾಡಿ, ಶಿವರಾತ್ರಿ ಉತ್ಸವ ಮಾಡುವ ಮೂಲಕ ಗ್ರಾಮೀಣ ಮಟ್ಟದಲ್ಲಿ ಜ್ಞಾನಾಭಿವೃದ್ಧಿ ಬೆಳಕನ್ನು ಬಿತ್ತುವ ಕಾರ್ಯ ಶ್ಲಾಘನೀಯವಾದುದು ಎಂದರು.

ಸಾನ್ನಿಧ್ಯವನ್ನು ಬೆಳಟ್ಟಿ ರಾಮಲಿಂಗೇಶ್ವರಮಠದ ಬಸವರಾಜ ಮಾಹಾಸ್ವಾಮಿಗಳು ವಹಿಸಿದ್ದರು. ಎಂ.ಡಿ. ಬಟ್ಟೂರ, ಅಪ್ಪಣ್ಣಾ ಇನಾಮತಿ, ಗೌರಮ್ಮಾ ಬಡ್ನಿ, ಡಾ. ಎಸ್. ಚವಡಿ ವೇದಿಕೆಯಲ್ಲಿದ್ದರು.

### ಮಹಿಳಾ, ಮಕ್ಕಳ ಗ್ರಾಮ ಸಭೆ ಉದ್ಘಾಟಿಸಿದ ಎಸ್.ವಿ. ನಾಡಗೌಡರ

# ಗ್ರಾಮೀಣ ಜನ ಜೀವನ ಸುಧಾರಿಸಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

1997ರಲ್ಲಿ ಪಂಚಾಯತ್ ರಾಜ್ ವ್ಯವಸ್ಥೆಯು ತಿದ್ದುಪಡಿಯಿಂದ ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರಕಾರವಾಗಿ ಪರಿವರ್ತನೆಯಾಗಿದ್ದರಿಂದ ಗ್ರಾಮೀಣ ಪ್ರದೇಶಗಳು ಅಭಿವೃದ್ಧಿಯಾಗಲು ಸಾಧ್ಯವಾಯಿತು ಎಂದು ಕರ್ನಾಟಕ ರಾಜ್ಯ ಮಹಾತ್ಮ ಗಾಂಧಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಉಪಕುಲಪತಿ ಎಸ್.ವಿ. ನಾಡಗೌಡರ ಹೇಳಿದರು.

ಇಲ್ಲಿಯ ಎಂ.ಕೆ.ಬಿ.ಎಸ್ ಶಾಲೆಯಲ್ಲಿ ಗ್ರಾ.ಪಂ ವತಿಯಿಂದ ಏರ್ಪಡಿಸಲಾಗಿದ್ದ ಮಹಿಳಾ ಮತ್ತು ಮಕ್ಕಳ ಹಾಗೂ ವಿಕಲಚೇತನರ ಗ್ರಾಮ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಪಂಚಾಯತ್ ರಾಜ್ ಕಾಯ್ದೆಯನ್ನು 2015ರಲ್ಲಿ ಗ್ರಾಮ ಸ್ವರಾಜ್ ಕಾಯ್ದೆಯನ್ನಾಗಿ ಅಂದಿನ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಎಚ್.ಕೆ. ಪಾಟೀಲರು ಗದಗದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಸ್ಥಾಪನೆ ಮಾಡಿ ಬದಲಾವಣೆ ಮಾಡಿದ್ದರಿಂದ ಮಕ್ಕಳ, ಮತ್ತು ಮಹಿಳಾ ಮತ್ತು ವಿಕಲಚೇತನರ ಅಭಿವೃದ್ಧಿ ಕಾಯ್ದೆಗಳು ಜಾರಿಗೆ ಬಂದವು. ಇದರಿಂದ ಗ್ರಾಮೀಣ ಜನ ಜೀವನ ಸುಧಾರಣೆಯಾಗಿದೆ. ಸ್ಥಳೀಯ ಸರಕಾಗಿರುವ ಗ್ರಾಮ ಪಂಚಾಯಿತಿಯು ತಮ್ಮ ಶಾಲೆಗಳ ಮೂಲಭೂತ



ಸೌಲಭ್ಯವನ್ನು ಕಲ್ಪಿಸಿ ಕಲಿಕಾ ಪರಿಸರವನ್ನು ನಿರ್ಮಿಸಿಕೊಡುತ್ತದೆ ಎಂದರು.ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಕಳೆದ ಗ್ರಾಮ ಸಭೆಯಲ್ಲಿ ಮಕ್ಕಳು ಕೇಳಿದ ಕುಡಿಯುವ ನೀರು, ಶೌಚಾಲಯ, ಮೈದಾನ, ಕಾಂಪೌಂಡ್ ನಿರ್ಮಾಣ ಸೇರಿದಂತೆ ಪ್ರೋತ್ಸಾಹದಾಯಕವಾಗಿ ಬಹುಮಾನ ಕೊಡಲಾಗಿದೆ. ಈಗ ಮಕ್ಕಳು ಕೇಳಿರುವ ಬಸ್ ಸೌಲಭ್ಯ, ಹೆಚ್ಚಿನ ಶೌಚಾಲಯ, ಕಂಪೌಂಡ್ ನಿರ್ಮಾಣ, ಆಟದ ಮೈದಾನ, ಶಾಲೆಗೆ ಸುಣ್ಣ-ಬಣ್ಣ, ಪರಿಸರ ನೈರ್ಮಲ್ಯ ಕಾಪಾಡುವುದು ಸೇರಿದಂತೆ ಶಿಕ್ಷಣ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಲಾಗುವುದು ಎಂದು ಭರವಸೆ ನೀಡಿದರು.

ವೈದ್ಯಾಧಿಕಾರಿ ಅಮೃತ ಹರಿದಾಸ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಖಿ ಕೇಂದ್ರ ಆಡಳಿತಾಧಿಕಾರಿ ಸುಜಾತಾ ಶಾಸ್ತ್ರೀಮಠ, ಸಖಿ ಕೇಂದ್ರದ ಕಾನೂನು ಸಲಹಗಾರರಾದ ಖಾಜಿಮುನ್ನಿ ನಾಯ್ಕರ, ಸಿ.ಡಿ.ಪಿ.ಒ ಸಂರಕ್ಷಣಾಧಿಕಾರಿ ರಾಜೇಶ್ವರಿ ಮೇಟಿ, ಸಿ.ಡಿ.ಪಿ.ಒ ಮಿಷನ್ ಶಕ್ತಿಯ ಯೋಜನೆಯ ಮಧುಶ್ರೀ ಉಪ್ಪಾರ, ತಾ.ಪಂ ನರೇಗಾ ಯೋಜನೆಯ ಸಹಾಯಕ ನಿರ್ದೇಶಕ ಕುಮಾರ ಪೂಜಾರ ಮಾತನಾಡಿದರು. ಪಿ.ಡಿ.ಒ ಅಮೀರನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಯಶೋದಾ ಉಪ್ಪಿನ, ಅಶೋಕ ಬೂದಿಹಾಳ, ಚಂದ್ರಕಲಾ ಮಾಡಲಗೇರಿ, ವೈ.ಎಚ್. ತೆಕ್ಕಲಕೋಟಿ, ಉದ್ದಣ್ಣವರ, ಶಾಹಿದಾಬೇಗಂ ಹತ್ತಿವಾಲೆ ಎಸ್.ಡಿ.ಎಂ.ಸಿ ಅಧ್ಯಕ್ಷೆ ನಾಗಮ್ಮ ಹಾಲಿನವರ ಸೇರಿದಂತೆ ಗ್ರಾ.ಪಂ ಸರ್ವ ಸದಸ್ಯರು, ವಿವಿಧ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಉಪಸ್ಥಿತರಿದ್ದರು. ವೈ.ವೈ. ಬೆಟಗೇರಿ ಸ್ವಾಗತಿಸಿದರು. ಎಸ್.ಎಚ್. ಶೆಟ್ಟಿನಾಯ್ಕರ ನಿರೂಪಿಸಿ ವಂದಿಸಿದರು.

### ಮೂಲಭೂತ ವ್ಯವಸ್ಥೆ ಕಲ್ಪಿಸಿ

257ಕ್ಕೂ ಹೆಚ್ಚು ಮಕ್ಕಳಿರುವ ಬಾಲಕಿಯರ ಸರಕಾರಿ ಪ್ರೌಢಶಾಲೆಗೆ ಹೆಚ್ಚುವರಿಯಾಗಿ ಶೌಚಾಲಯ ನಿರ್ಮಿಸಿಕೊಡಬೇಕು ಎಂದು ಬಾಲಕಿಯರು ಒತ್ತಾಯಿಸಿದರು. ಶಾಲೆಗೆ ಸುಣ್ಣ-ಬಣ್ಣ, ಶೌಚಾಲಯ, ಕ್ರೀಡಾ ಮೈದಾನ ಅಭಿವೃದ್ಧಿಗೊಳಿಸಿ ಶಾಲಾ ಪರಿಸರವನ್ನು ಅನೈತಿಕ ಚಟುವಟಿಕೆಯಿಂದ ರಕ್ಷಿಸಬೇಕು ಎಂದು ಕೆ.ಜಿ.ಎಸ್ ಹೆಣ್ಣು ಮಕ್ಕಳ ಶಾಲೆಯ ಮಕ್ಕಳು ಆಗ್ರಹಿಸಿದರು. ಎಂಕೆ.ಬಿಎಸ್ ಶಾಲೆಯ ಮಕ್ಕಳು ತಮ್ಮ ಸಮಸ್ಯೆಯನ್ನು ಹೇಳಿಕೊಂಡರು. ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟಲು ಎಲ್ಲಾ ಶಾಲೆಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಬೇಕು ಎಂದು ಡಿ.ಪಿ.ಇ.ಪಿ ಪ್ರಾಥಮಿಕ ಶಾಲೆಯ ಮಕ್ಕಳು ವಿನಂತಿಸಿಕೊಂಡರು. ಸರಕಾರಿ ಉರ್ದು ಶಾಲೆಯ ಮಕ್ಕಳು ಮೈದಾನ ಮತ್ತು ಶೌಚಾಲಯ ನಿರ್ಮಿಸಿ ಕೊಡಬೇಕೆಂದರು. ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ಮಕ್ಕಳು ಮೈದಾನ ಅಭಿವೃದ್ಧಿ ಮತ್ತು ಬಸ್ ನಿಲುಗಡೆ ವ್ಯವಸ್ಥೆ ಕಲ್ಪಿಸಬೇಕೆಂದು ಕೇಳಿಕೊಂಡರು.

# ಎಮ್‌ಇಎಸ್ ನಾಡದ್ರೋಹಿಗಳನ್ನು ಬಂಧಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯಲ್ಲಿ ರಾಜ್ಯ ಸಾರಿಗೆ ಬಸ್ ನಿರ್ವಾಹಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ, ಸುಳ್ಳು ಪ್ರಕರಣ ದಾಖಲಿಸಿ ಪುಂಡಾಟಿಕೆ ಮೆರೆದ ಮಹಾರಾಷ್ಟ್ರದ ಎಮ್‌ಇಎಸ್ ಪುಂಡರನ್ನು ಕೂಡಲೇ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಹೆಚ್.ಶಿವರಾಮೇಗೌಡ್ರ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾಧ್ಯಕ್ಷ ಮಂಜುನಾಥ ಪರ್ವತಗೌಡ್ರ ಮಾತನಾಡಿ, ನಮ್ಮ ರಾಜ್ಯದಲ್ಲೇ ಇದ್ದು, ನಮ್ಮ ರಾಜ್ಯದ ಎಲ್ಲಾ ಸವಲತ್ತುಗಳನ್ನು ಪಡೆದು ನಮ್ಮ ನಾಡಿಗೆ ದ್ರೋಹ ಬಗೆಯುವ ಎಮ್‌ಇಎಸ್. ಪುಂಡರ ವಿರುದ್ಧ ರಾಜ್ಯ ಸರಕಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಂಡು ಕೂಡಲೇ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿದರು.

ಉತ್ತರ ಕರ್ನಾಟಕ ಸಂಚಾಲಕ ಬಸವರಾಜ ದೇಸಾಯಿ ಮಾತನಾಡಿ, ನಮ್ಮ ರಾಜ್ಯದ ರಸ್ತೆ ಸಾರಿಗೆ ನಿರ್ವಾಹಕನ ಮೇಲೆ ಹಲ್ಲೆ ನಡೆಸಿ ಸುಳ್ಳು ಪ್ರಕರಣವನ್ನ ದಾಖಲು ಮಾಡಿರುವುದು ಖಂಡನಾರ್ಹ ಎಂದರು.

ಉತ್ತರ ಕರ್ನಾಟಕ ರೈತ ಘಟಕದ ಅಧ್ಯಕ್ಷ ಬಸಯ್ಯ ಗುಡ್ಡಿಮಠ ಹೋರಾಟದ ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ವೇದಿಕೆಯ ಪದಾಧಿಕಾರಿಗಳಾದ ಬಸವರಾಜ ಮುಳ್ಳಾಳ, ಸುರೇಶ ಮುಳಗುಂದ, ಯಮನೂರಸಾಬ ನದಾಫ್, ಸಂತೋಷ ಕುಂಬಾರ, ರಾಘವೇಂದ್ರ ಭಾಕಳೆ, ಪರಶುರಾಮ ಭನ್ನುರ, ಬಸವರಾಜ ಕಟಗಿ, ಇಬ್ರಾಹಿಮ್ ನದಾಫ್, ಮುದಿಯಪ್ಪ ಗಾಂಜಾರ, ಮಂಜುನಾಥ ಹಿರೇಮನಿ, ಶರಣಪ್ಪ ತಡಹಾಳ, ಸುರೇಶ ಬೂದಿಹಾಳ, ಭೀಮಪ್ಪ ಪೂಜಾರ, ಶಿವಕ್ಕ ಬೇವಿನಮರದ, ಪ್ರೇಮವ್ವ ಬೇವಿನಮರದ, ನೀಲವ್ವ ಹಿರೇಮನಿ, ಶಾಂತವ್ವ ದೊಡ್ಡಮನಿ, ದುರ್ಗವ್ವ ಹಾದಿಮನಿ, ಬಸವ್ವ ಕಟ್ಟೀಮನಿ, ರೇಣವ್ವ ಮುಳಗುಂದ, ಗಂಗವ್ವ ಹಿರೇಮನಿ, ಯಲ್ಲಪ್ಪ ಪ್ಯಾಟಿ, ಮಾರುತಿ ದೊಡ್ಡಮನಿ ಸೇರಿದಂತೆ ನೂರಾರು ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.




# ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯವು ಜಿಲ್ಲೆಯ ನಾಗಾವಿ ಗ್ರಾಮದಲ್ಲಿ ಎನ್‌ಎಸ್‌ಎಸ್ ಘಟಕದ ವತಿಯಿಂದ ವಾರ್ಷಿಕ ವಿಶೇಷ ಶಿಬಿರ ಹಮ್ಮಿಕೊಂಡಿದ್ದು, 5ನೇ ದಿನದ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು.

ಉಪನ್ಯಾನಕರಗಿ ಆಗಮಿಸಿದ್ದ ಪ್ರೊ. ವೀಣಾ. ತಿರ್ಲಾಪೂರ ಆರೋಗ್ಯಕರ ಸಮಾಜಕ್ಕಾಗಿ ಯುವಜನತೆ ವಿಷಯವಾಗಿ ಉಪನ್ಯಾಸ ನೀಡಿ, ಯುವಕರು ಕೆಟ್ಟ ಚಟಗಳಿಂದ ದೂರವಿದ್ದು, ಮಾನಸಿಕವಾಗಿ ಗಟ್ಟಿಯಾಗಿರಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ನಾಗಾವಿ ಗ್ರಾ.ಪಂ ಸದಸ್ಯರಾದ ಉಳಿವೆಪ್ಪಾ ಬ.ಶಿಗ್ಲಿ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಜಂಬಪ್ಪಾ ಮಡಿವಾಳರ್, ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ನೇತ್ರಾವತಿ ಅಂಗಡಿ, ಎನ್‌ಎಸ್‌ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ. ವಾಗೀಶ ಗು.ರೇಶ್ಮಿ, ಎನ್‌ಎಸ್‌ಎಸ್. ಘಟಕದ ಕಾರ್ಯದರ್ಶಿ ಪವನಕುಮಾರ ಕುಲಕರ್ಣಿ, ಸಾಕ್ಷಿ ಹೊಸಮಠ ಸೇರಿದಂತೆ ಶಿಬಿರಾರ್ಥಿಗಳು ಉಪಸ್ಥಿತರಿದ್ದರು. ಸತೀಶ ಕಣವಿ ಸ್ವಾಗತಿಸಿದರು. ಶಿಬಿರಾರ್ಥಿ ಸಾಕ್ಷಿ ಹೊಸಮಠ ನಿರೂಪಿಸಿದರು, ಕಿರಣ ಓಂಕಾರಿ ವಂದಿಸಿದರು.



# ಈಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಶಿವನ ಆರಾಧನೆಯಿಂದ ಜೀವನದಲ್ಲಿ ಶಾಂತಿ-ನೆಮ್ಮದಿ ಸಿಗುತ್ತದೆ. ಶಿವಲಿಂಗ ಪೂಜಿಸಿ ತಮ್ಮ ಜೀವನದಲ್ಲಿ ಉನ್ನತಿ ಪಡೆಯಿರಿ ಎಂದು ಶ್ರೀ ಈಶ್ವರ ದೇವಸ್ಥಾನದ ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಕೃಷ್ಣಾಸಾ ಮೇರವಾಡೆ ಹೇಳಿದರು.

ಅವರು ಬೆಟಗೇರಿಯ ಶ್ರೀ ಈಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಆಚರಣೆಯ ನಿಮಿತ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಸಂದರ್ಭದಲ್ಲಿ ಈಶ್ವರ ದೇವಸ್ಥಾನದ ಪಂಚ ಟ್ರಸ್ಟ್ ಕಮಿಟಿಯ ಮಂಜುನಾಥ ಮೇರವಾಡೆ, ಪ್ರಕಾಶ ಮೇರವಾಡೆ, ತುಳಸಿನಾಥ ಮೇರವಾಡೆ, ಉಮಾಕಾಂತಸಾ ಮೇರವಾಡೆ, ದತ್ತೂಸಾ ಖೋಡೆ, ಟೋಕಣ್ಣ ಅಗಡಿ, ಗಣೇಶ ಪವಾರ, ವಿನಾಯಕ ಮಹೇಂದ್ರಕರ, ದೇವೇಂದ್ರಪ್ಪ ಪೂಜಾರ, ಸೋಮನಾಥ ಮೇರವಾಡೆ, ಉತ್ಸವ ಕಮೀಟಿಯ ಮಾಧೂಸಾ ಮೇರವಾಡೆ, ರಾಮು ಬಾಕಳೆ, ಕಿರಣ ಮೇರವಾಡೆ, ಕೊಟ್ರೇಶ ಗೊಂಬಿ, ಸುರೇಶ ಮೇರವಾಡೆ, ಮಹಾದೇವ ಮೇರವಾಡೆ, ಮಲ್ಲೇಶ ಕುರಟ್ಟಿ, ಸಂತೋಷ ಮೇರವಾಡೆ, ಪುಟ್ಟರಾಜ ಮೇರವಾಡೆ ಹಾಗೂ ಸಕಲ ಭಕ್ತರು ದೇವಸ್ಥಾನಕ್ಕೆ ಆಗಮಿಸಿ ಶಿವರಾತ್ರಿಯ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿದರು.



# ಶಿವರಾತ್ರಿಯಂದು ಕಾಶಿ ವಿಶ್ವನಾಥ ದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾಶಿವರಾತ್ರಿ ಮಹೋತ್ಸವದ ಅಂಗವಾಗಿ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು ಗದುಗಿನ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಏರ್ಪಡಿಸಿದ್ದ ಕಾಶಿ ವಿಶ್ವನಾಥ ದರ್ಶನ ಭಕ್ತಾದಿಗಳನ್ನು ಆಕರ್ಷಿಸಿತು.

ಕಾಶಿ ವಿಶ್ವನಾಥ ದರ್ಶನದ ಮಹಾದ್ವಾರವನ್ನು ಪ್ರವೇಶಿಸಿದಂತೆಯೇ ಪ್ರದಕ್ಷಣೆ ಲಿಂಗು ದರ್ಶನವು ಭಕ್ತರ ಹೃದಯ ಅರಳಿತು. ಮಹಾಶಿವರಾತ್ರಿಯ ಪುಣ್ಯ ದಿನದಂದು ಒಂದೇ ದಿನದಲ್ಲಿ ದ್ವಾದಶ ಜ್ಯೋತಿರ್ಲಿಂಗ ದರ್ಶಿಸಿ ಆಶೀರ್ವಾದ ಪಡೆದ ಭಕ್ತರ ಹೃದಯ ತಣಿಯಿತು.

ಈ ವೈವಿಧ್ಯಮಯ ಮಂಟಪವನ್ನು ಚಂದ್ರು ಬಾಳೇಹಳ್ಳಿಮಠ, ಪ್ರಸನ್ನ ಕುಮಾರ ಶಾಬಾದಿಮಠ, ಮೃತ್ಯುಂಜಯ ಸಂಕೇಶ್ವರ, ವಿನೀತ್ ಕುಮಾರ್ ಜಗತಾಪ ಮುಂತಾದವರು ಉದ್ಘಾಟಿಸಿದರು.




ಕಾರ್ಯಕ್ರಮದಲ್ಲಿ ರವೀಂದ್ರ ಹೊನ್ನಗುಡಿ, ರಾಜು ಕಾಟೀಗರ, ಪ್ರದೀಪ್ ಕಟೀಗಾರ್, ವಿರುಪಾಕ್ಷಿ, ಸಿದ್ಲಿಂಗೇಶ್ ಅಂಗಡಿ, ವಿರುಪಾಕ್ಷಿ ಶಿದ್ಲಿಂಗ್, ಟಿ.ಎನ್. ಕಲಬುರ್ಗಿ, ಕಿರಣ್ ಕಾಟೀಗರ, ರಾಜಶೇಖರ ಕೆ, ಎಸ್.ಎನ್. ಮುನ್ನಿ, ನಾರಾಯಣ ರಾಜಪುತ್, ಅನಿಲ್ ಮುಳಗುಂದ, ಗಂಗಾಧರ ಮುಳಗುಂದ, ಸಂಕೇತ್ ದಂಡಿನ್, ಸಂಧ್ಯಾ ಕಟವಟೆ, ರೇಣುಕಾ ಪ್ರಸಾದ್ ಹಿರೇಮಠ, ಕಮಲಾಕರ್ ರಂಗಾಪುರ್, ಯೋಗೇಶ್ ಶಿದ್ಲಿಂಗ್, ಸಾವಳಾರಾಮ್, ಅಮೃತ್ ಖೋಡೆ, ಪ್ರಮೋದ್ ಅರಸಿದ್ದಿ, ಚನ್ನಯ್ಯಾ ಸವದತ್ತಿಮಠ, ಕೃಷ್ಣಾ ಶಿದ್ಲಿಂಗ್, ಸೂರಜ್ ಕಟವಟೆ, ರವಿ ಶಿದ್ಲಿಂಗ್, ನಂದಿನಿ ಶಾಬಾದಿಮಠ್, ವೆಂಕಟೇಶ್ ಹಬೀಬ ಮುಂತಾದವರು ಪಾಲ್ಗೊಂಡಿದ್ದರು.

ಶಿವರಾತ್ರಿ ರಹಸ್ಯದ ಕುರಿತು ರಾಜಯೋಗಿನಿ ಬ್ರಹ್ಮಾಕುಮಾರಿ ಜಯಂತಿ ಅಕ್ಕನವರು ಮಾತನಾಡಿದರು. ಮಹೇಶ ಜಿ.ಕೆರಿ, ಜಗತಾಪ, ಜಯದೇವ್ ಮೆಣಸಿಗಿ ಮುಂತಾದವರು ಮಾತನಾಡಿದರು. ಬ್ರಹ್ಮಾಕುಮಾರಿ ರೇಖಾ ಸ್ವಾಗತಿಸಿದರು, ಬ್ರಹ್ಮಾಕುಮಾರಿ ಸಾವಿತ್ರಿ ನಿರೂಪಿಸಿದರು.

# ಭಾರತೀಯ ಸಂಸ್ಕೃತಿ ಜಾನಪದದ ಮೂಲ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯ ಸಂಸ್ಕೃತಿ, ಹಬ್ಬ, ಆಚರಣೆ, ಸಂಪ್ರದಾಯಗಳು ಜಾನಪದ ಸಾಹಿತ್ಯ, ಹಾಡುಗಳಿಗೆ ಮೂಲಾಧಾರವಾಗಿದೆ ಎಂದು ತಾಲೂಕಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ 'ಮಾಸದ ಮಾತು' ಮಾಲಿಕೆಯಲ್ಲಿ ಮಹಾಶಿವರಾತ್ರಿಯ ಪ್ರಯುಕ್ತ ಹಮ್ಮಿಕೊಂಡ 'ಜಾನಪದ ಜಾಗರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಜನರ ಬದುಕಿನೊಂದಿಗೆ ಮೇಳೈಸಿಕೊಂಡು ಎಲ್ಲರಿಗೂ ಅರ್ಥವಾಗುವ ಸರಳ ಭಾಷೆಯ ಸಾಹಿತ್ಯವೇ ಜನಪದ ಸಾಹಿತ್ಯವಾಗಿದೆ. ಗ್ರಾಮೀಣ ಜನರ ನಿತ್ಯ ಬದುಕಿನಲ್ಲಿ ಹಾಸುಹೊಕ್ಕಾಗಿರುವ ಒಗಟು, ಲಾವಣಿ, ಸೋಭಾನೆ ಹಾಡು, ಕುಟ್ಟುವ ಪದ, ಹಂತಿ ಹಾಡು, ಡೊಳ್ಳಿನ ಹಾಡು, ಬೀಸುವ ಪದ, ಮದುವೆ ಹಾಡು ಹೀಗೆ ಇನ್ನೂ ಹಲವಾರು ಪ್ರಕಾರಗಳಲ್ಲಿ ಜಾನಪದ ಸಾಹಿತ್ಯವೇ ತುಂಬಿಕೊಂಡಿದೆ. ಜಾನಪದ ಸಾಹಿತ್ಯವು ಧರ್ಮ, ಸಂಸ್ಕೃತಿ, ಆಚಾರ-ವಿಚಾರ,ಉಡುಗೆ-ತೊಡುಗೆಗಳ ಸಮ್ಮಿಲನವಾಗಿದೆ ಎಂದರು.

ವಿಜ್ಞಾನ ಸಂಪನ್ಮೂಲ ಶಿಕ್ಷಕ ಈರಣ್ಣ ಗಾಣಿಗೇರ ಮಾತನಾಡಿ, ಶಿವರಾತ್ರಿ ಹಬ್ಬದ ಆಚರಣೆಯ ಹಿಂದೆ ವೈಜ್ಞಾನಿಕ ಕಾರಣವಿದೆ. ಚಳಿಗಾಲ ಕಳೆದು ಬೇಸಿಗೆ ಬರುವ ಸಂದರ್ಭದಲ್ಲಿ ಮನುಷ್ಯನ ದೇಹ ಪ್ರಕೃತಿಯ ಜೊತೆಗೆ ಹೊಂದಾಣಿಕೆ ಮಾಡಲು ಶಿವರಾತ್ರಿ ಸಹಕಾರಿಯಾಗಿರುತ್ತದೆ ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಸಾಹಿತಿ, ಪತ್ರಕರ್ತ ಅಶೋಕ ಸೊರಟೂರ, ಅಧ್ಯಕ್ಷತೆ ವಹಿಸಿದ್ದ ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಈಶ್ವರ ಗದಗ ಮಾತನಾಡಿದರು. ಧಾರ್ಮಿಕ ಸೇವಾಧಾರಿಗಳಾದ ತಿಪ್ಪಣ್ಣ ಹಡಪದ, ಕೊಟ್ರೇಶ ಅಳವಂಡಿ, ಕ.ಸಾ.ಪ ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ಉಪಸ್ಥಿತರಿದ್ದರು.

ಗಾಯಕರಾದ ಹನುಮಂತಸಾ ಚೌದರಿ, ಸುರೇಶ ಉಮಚಗಿ, ಪೂಜಾ ಹಬೀಬ, ತಬಲಾ ವಾದಕ ಮಹಾಬಳೇಶ್ವರ ಕಡ್ಡಿಪೂಜಾರ 3 ಗಂಟೆಗಳ ಕಾಲ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ನಮ್ರತಾ ಸುನೀಲ ಮೆಡ್ಲೇರಿ ಪ್ರಾರ್ಥಿಸಿದಳು. ಶಿವರಾಜ ಗುಜರಿ ಸ್ವಾಗತಿಸಿದರು. ಪುರಸಭಾ ಮಾಜಿ ಉಪಾಧ್ಯಕ್ಷ ಗುರುಪುತ್ರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕ.ಸಾ.ಪ ಸಂಘಟನಾ ಕಾರ್ಯದರ್ಶಿ ನಾಗರಾರಿ ಮಜ್ಜಿಗುಡ್ಡ ನಿರೂಪಿಸಿದರು.

### ಈಶ್ವರೀಯ ವಿ.ವಿ ಏರ್ಪಡಿಸಿದ್ದ ಶಿವರಾತ್ರಿ ಸಮಾರಂಭದಲ್ಲಿ ಕುಮಾರಸ್ವಾಮಿ ಕೋರಧಾನ್ಯಮಠ

# ಶಿವರಾತ್ರಿ ಜ್ಞಾನ ವೃದ್ಧಿಸುವ ಹಬ್ಬ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಿವರಾತ್ರಿ ಹಬ್ಬವು ನಮ್ಮ ಮನದ ಕತ್ತಲೆಯನ್ನು ಹೊಡೆದೋಡಿಸಿ ಜ್ಞಾನವನ್ನು ವೃದ್ಧಿಸುವ ಹಬ್ಬವಾಗಿದೆ. ಇಂದಿನ ದಿನ ಉಪವಾಸ ಮತ್ತು ಜಾಗರಣೆ ಮೂಲಕ ಶಿವನನ್ನು ಒಲಿಸಿಕೊಳ್ಳುವ ಕಾರ್ಯವನ್ನು ಮಾಡುತ್ತೇವೆ. ಪರಶಿವ ಎಲ್ಲರಿಗೂ ಒಳ್ಳೆಯದನ್ನು ಮಾಡಲಿ ಎಂದು ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಹೇಳಿದರು.

ಪಟ್ಟಣದ ಬಸ್‌ನಿಲ್ದಾಣದ ಎದುರಿಗಿನ ಸರಕಾರಿ ಪ್ರಾಥಮಿಕ ಶಾಲೆಯ ಮೈದಾನದಲ್ಲಿ ಸ್ಥಳೀಯ ಈಶ್ವರೀಯ ವಿಶ್ವವಿದ್ಯಾಲಯದವರು ಏರ್ಪಡಿಸಿದ್ದ ಶಿವರಾತ್ರಿ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂದಿನ ಕಾರ್ಯಕ್ರಮದಲ್ಲಿ ನಮ್ಮ ಪ.ಪಂ ಪೌರ ಕಾರ್ಮಿಕರನ್ನು ಸನ್ಮಾನಿಸಿದ್ದು ಸಂತಸ ನೀಡಿದೆ. ಪೌರ ಕಾರ್ಮಿಕರು ಊರಿನ ಸ್ವಚ್ಛತೆಯ ಬಗ್ಗೆ ದಿನದ 24 ತಾಸೂ ಶ್ರಮಿಸುತ್ತಾರೆ. ಅವರನ್ನು ಗೌರವಿಸಿದ್ದು ಅಭಿಮಾನದ ಸಂಗತಿ ಎಂದರು.

ಡಾ. ಆರ್.ಕೆ. ಗಚ್ಚಿನಮಠ ಮಾತನಾಡಿ, ಶಿವರಾತ್ರಿಯನ್ನು ಜಗತ್ತಿನಾದ್ಯಂತ ಆಚರಿಸುತ್ತಾರೆ. ಈ ಸಮಯದಲ್ಲಿ ನಾವು ವಾತಾವರಣದಲ್ಲಿ ಬದಲಾವಣೆಯನ್ನು ಕಾಣುತ್ತೇವೆ. ಚಳಿ ಕಡಿಮೆಯಾಗಿ, ಬಿಸಿಲು ಹೆಚ್ಚಾಗುವ ಸಂದರ್ಭವಿದು. ಈ ಸಮಯದಲ್ಲಿ ಶಿವನ ಭಜನೆ, ಸ್ಮರಣೆ ಮನಸ್ಸಿಗೆ ಆನಂದ ನೀಡುತ್ತದೆ ಎಂದರು.

ಶಿವನಗೌಡ ಪಾಟೀಲ ಮಾತನಾಡಿ, ನಮ್ಮ ದೇಹದ ರಚನೆಯೇ ಹಲವಾರು ರಾಸಾಯನಿಕಗಳಿಂದ ಕೂಡಿದೆ. ವಾತಾವರಣ ಬದಲಾದಂತೆ ಈ ದೇಹದಲ್ಲಿಯೂ ಬದಲಾವಣೆಗಳಾಗುತ್ತವೆ. ಶರೀರ ಎಲ್ಲದಕ್ಕೂ ಒಗ್ಗಿಕೊಳ್ಳುವ ಶಕ್ತಿಯನ್ನು ನೀಡು ಎಂದು ಶಿವರಾತ್ರಿಯಂದು ಶಿವನ ಪೂಜೆ ಮಾಡುತ್ತೇವೆ ಎಂದರು.

ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಸಂಚಾಲಕಿ ಬಿ.ಕೆ. ಸವಿತಕ್ಕ ಈಶ್ವರೀಯ ಸಂದೇಶ ನೀಡಿದರು. ಕೆಜಿಎಂಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಮಾತನಾಡಿದರು. ವೇದಿಕೆಯ ಮೇಲೆ ಎಂಸಿಎಸ್ ಎಸ್‌ಡಿಎಂಸಿ ಅಧ್ಯಕ್ಷ ತಿಮ್ಮರೆಡ್ಡಿ ಬಂಡಿವಡ್ಡರ, ಮುಖ್ಯ ಶಿಕ್ಷಕಿ ಲಲಿತಾ ವ್ಯಾಗೇರಿ, ಮುಖ್ಯ ಶಿಕ್ಷಕ ಬಿ.ಬಿ. ಕುರಿ, ದೈಹಿಕ ನಿರ್ದೇಶಕ ಆರ್.ಎಸ್. ನರೇಗಲ್ಲ, ಎಂ.ಎಸ್. ಪೂಜಾರ, ಗಿರಿಜಾ ಪೂಜಾರ ಮತ್ತಿತರರು ಉಪಸ್ಥಿತರಿದ್ದರು.

ಶಿಕ್ಷಕಿ ಶ್ವೇತಾ ಕೊಟಗಿ ನಿರೂಪಿಸಿದರು. ಶಿಕ್ಷಕ ರವಿ ದೇವರೆಡ್ಡಿ ವಂದಿಸಿದರು. 45 ಅಡಿ ಎತ್ತರದ ಬಲೂನು ಶಿವಲಿಂಗ ಎಲ್ಲರ ಆಕರ್ಷಣೆಯ ಕೇಂದ್ರವಾಗಿತ್ತು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಶಿವ ಎಂದರೆ ಮೋಕ್ಷ ನೀಡುವವನು ಎಂದರ್ಥ. ಧ್ಯಾನ ಮಾತ್ರದಿಂದ ಮತ್ತು ಅಭಿಷೇಕದಿಂದ ಅವನು ಭಕ್ತರ ಇಷ್ಟಾರ್ಥಗಳನ್ನು ನೆರವೇರಿಸುತ್ತಾನೆ. ಶಿವರಾತ್ರಿಯ ದಿನ ಉಪವಾಸ ಮಾಡುವುದು ಎಂದರೆ ಶಿವನ ಬಳಿಯಲ್ಲಿ ನಮ್ಮ ಮನಸ್ಸನ್ನು ಕೇಂದ್ರೀಕರಿಸುವುದು ಎಂದರ್ಥ. ಶಿವನ ಪೂಜೆಯಿಂದ ನಮ್ಮ ಮನದ ಕತ್ತಲು ಹಿಂದಕ್ಕೆ ಸರಿದು ಜ್ಞಾನದ ಬೆಳಕು ನಮ್ಮಲ್ಲಿ ಪ್ರವೇಶಿಸುತ್ತದೆ ಎಂದರು.

## ಪೀಠೋಪಕರಣ ಒದಗಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಪಂಚಾಯಿತಿ ವತಿಯಿಂದ ನಿವೃತ್ತ ನೌಕರರ ಸಂಘಕ್ಕೆ ಒಂದು ಕೋಣೆಯನ್ನು ಗಾಂಧಿ ಭವನದಲ್ಲಿ ನೀಡಿದ್ದೀರಿ. ಆದರೆ ಅಲ್ಲಿ ಬಂದವರಿಗೆ ಕೂರಲು ಸೂಕ್ತ ಪೀಠೋಪಕರಣಗಳಿಲ್ಲ, ಕಪಾಟುಗಳಿಲ್ಲ. ಆದ್ದರಿಂದ ನಮಗೆ ಪೀಠೋಪಕರಣಗಳನ್ನು ಒದಗಿಸಿಕೊಡಬೇಕೆಂದು ಆಗ್ರಹಿಸಿ ನಿವೃತ್ತ ನೌಕರರ ಸಂಘದ ಸದಸ್ಯರು ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಅವರ ನೇತೃತ್ವದಲ್ಲಿ ಪಟ್ಟಣ ಪಂಚಾಯಿತಿಗೆ ಭೇಟಿ ನೀಡಿ ಮುಖ್ಯಾಧಿಕಾರಿಗೆ ಮನವಿ ಅರ್ಪಿಸಿದರು.

ನಮಗೆ ಪೀಠೋಪಕರಣಗಳ ಅವಶ್ಯಕತೆಯಿದ್ದು, ನಮ್ಮ ಸಂಘದ ಕಚೇರಿಗೆ 25 ಪ್ಲಾಸ್ಟಿಕ್ ಖುರ್ಚಿಗಳನ್ನು, ಒಂದು ಡ್ರಾವರ್ ಇರುವ ಟೇಬಲ್‌ನ್ನು ಮತ್ತು ಒಂದು ಲಾಕರ್ ಹೊಂದಿರುವ ಆಲ್ಮೇರಾವನ್ನು ಒದಗಿಸಿಕೊಡಬೇಕೆಂದು ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಮುಖ್ಯಾಧಿಕಾರಿಗೆ ವಿನಂತಿಸಿದರು.

ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ನಿಡಶೇಶಿ, ಆಡಳಿತ ಸಮಿತಿಯವರೊಂದಿಗೆ ಚರ್ಚಿಸಿ ಬೇಡಿಕೆಯನ್ನು ಈಡೇರಿಸಲು ಕ್ರಮ ಜರುಗಿಸುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನುಲ್ಕಿ, ನಿವೃತ್ತ ಸೈನಿಕರಾದ ಮಲ್ಲಿಕಾರ್ಜುನ ಮಲ್ಲನಗೌಡ್ರ, ಶಿವಾನಂದ ಬಂಡಿಹಾಳ, ಈಶ್ವರಚಂದ್ರ ಬಾಗಲಿ, ದಾದಾಸಾಬ್ ನದಾಫ್, ರಾಮಪ್ಪ ರೋಣದ, ಮಲ್ಲಪ್ಪ ಕಡೆತೋಟದ, ಬಸವೇಶ್ವರ ಚಿಕ್ಕೊಪ್ಪ, ಶಶಿಕಾಂತ ಕರಡಿ, ದಾವಲಸಾಬ ಕಿಲ್ಲೇದಾರ, ಶಿವಪ್ಪ ಹಂಡಿ, ಬಲಭೀಮ ಮಾರನಬಸರಿ ಮುಂತಾದವರಿದ್ದರು.

### ಜಿಲ್ಲಾ ನ್ಯಾಯಾಲಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಜಿಲ್ಲಾ ನ್ಯಾಯಾಧೀಶ ಬಸವರಾಜ

# ಮಾ.8ರಂದು ರಾಷ್ಟ್ರೀಯ ಲೋಕ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಚ ನ್ಯಾಯಾಲಯ ನವದೆಹಲಿ, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಮಾರ್ಚ್ 8ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು





ಮತ್ತು ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು. ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ. ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದರು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚಿನಂತೆ ಒಟ್ಟು 15 ಬೆಂಚಗಳನ್ನು ರಚಿಸಿದೆ. ಗದಗ ಜಿಲ್ಲೆಯಲ್ಲಿ ಒಟ್ಟು 20227 ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 4719 ಪ್ರಕರಣಗಳನ್ನು ಗುರುತಿಸಿದ್ದು, ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ಗುರುತಿಸಲಾಗಿದೆ ಎಂದು ತಿಳಿಸಿದರು.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನವೊಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಮಾರ್ಚ್ 8ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ. ಪಕ್ಷಗಾರರು ನ್ಯಾಯಾಲಯಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ವಾರ್ತಾಧಿಕಾರಿ ವಸಂತ ಮಡ್ಲೂರ ಉಪಸ್ಥಿತರಿದ್ದರು.

ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡ್ರ ಮಾತನಾಡಿ, ಕಳೆದ ಡಿಸೆಂಬರ್-2024ರಂದು ಜರುಗಿದ ಲೋಕ ಅದಾಲತ್‌ನಲ್ಲಿ 3042 ಚಾಲ್ತಿ ಪ್ರಕರಣಗಳನ್ನು ಹಾಗೂ 31540 ವ್ಯಾಜ್ಯಪೂರ್ವ ಪ್ರಕರಣಗಳನ್ನು ಸೇರಿ ಒಟ್ಟು 34582 ಪ್ರಕರಣಗಳು ರಾಜೀ ಮೂಲಕ ಇತ್ಯರ್ಥಪಡಿಸಿದೆ. ಇದರಲ್ಲಿ ವಿಶೇಷವಾಗಿ 17 ಕೌಟುಂಬಿಕ ಪ್ರಕರಣಗಳಲ್ಲಿ ದಂಪತಿಗಳನ್ನು ಪುನಃ ಒಂದುಗೂಡಿಸಿ ಕಳುಹಿಸಲಾಗಿದೆ ಎಂದು ಹೇಳಿದರು.

### ಸಂಘದ ಪದಾಧಿಕಾರಿಗಳ ರಾಜೀನಾಮೆಗೆ ಒತ್ತಾಯಿಸಿ ಧರಣಿ ಕುಳಿತ ಶ್ರೀ ಕುಮಾರ ಮಹಾರಾಜರು

# ಅನ್ಯಾಯದ ವಿರುದ್ಧ ಹೋರಾಟ-ತ್ಯಾಗಕ್ಕೂ ಸಿದ್ಧ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಮ್ಮ ಮೇಲೆ ಮಾಡಿರುವ ಆರೋಪ ಸಾಬೀತು ಮಾಡಬೇಕು ಮತ್ತು 18 ವರ್ಷಗಳಿಂದ ತಾವೇ ಅಧಿಕಾರದಲ್ಲಿದ್ದುಕೊಂಡು ಎಲ್ಲ ನಿಯಮಗಳನ್ನು ಗಾಳಿಗೆ ತೂರಿರುವ ತಾಲೂಕು ಬಂಜಾರ ಸಂಘದ ಅಧ್ಯಕ್ಷರಾದಿಯಾಗಿ ಎಲ್ಲ ಪದಾಧಿಕಾರಿಗಳು ರಾಜೀನಾಮೆ ನೀಡಬೇಕು ಎಂದು ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜರು ಧರಣಿ ಸತ್ಯಾಗ್ರಹ ಕೈಗೊಂಡಿದ್ದಾರೆ.

ಬುಧವಾರ ಬಂಜಾರ ಸಮಾಜದ ಅಧ್ಯಕ್ಷ ಶಿವಣ್ಣ ಲಮಾಣಿ ಸೇರಿ ಸಮಾಜದ ಅನೇಕ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ಕುಮಾರ ಮಹಾರಾಜರು ಬಂಜಾರ ಸಮಾಜದ ಸ್ವಾಮಿಯಲ್ಲ, ಸ್ವಯಂಘೋಷಿತ ಸ್ವಾಮಿಯಾಗಿದ್ದಾರೆ. ಸಮಾಜ ಒಡೆಯುವ ಮತ್ತು ಇತರೇ ಜಾತಿಯವರೊಂದಿಗೆ ದ್ವೇಷಮಯ



ವಾತಾವರಣ ಸೃಷ್ಟಿಸುತ್ತಿದ್ದಾರೆ. ಸಮಾಜದವರು ಬಹಿಷ್ಕಾರ ಹಾಕುವ ಮುನ್ನ ಅವರು ಮಠ ಬಿಟ್ಟು ತೆರಳಬೇಕು ಮತ್ತು ಇವರನ್ನು ಗಡಿಪಾರು ಮಾಡಬೇಕು ಎಂದು ಆರೋಪಿಸಿದ್ದರು.

ಆರೋಪದ ಬೆನ್ನಲ್ಲೇ ಶ್ರೀಗಳು ಬಂಜಾರ ಸಮಾಜದ ತಾಲೂಕಾಧ್ಯಕ್ಷ ಶಿವಣ್ಣ ಲಮಾಣಿ ಅವರ ಗ್ರಾಮ ನೆಲೂಗಲ್‌ನಲ್ಲಿ ಭಕ್ತರೊಡಗೂಡಿ ಧರಣಿ ಸತ್ಯಾಗ್ರಹ ಕೈಗೊಂಡಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಅವರು, ತಾವು 2019ರಲ್ಲೇ ಸೇವಾಲಾಲ್ ಬಂಜಾರ ಗುರುಪೀಠ ಕೃಷ್ಣಾಪುರದಲ್ಲಿ ಬಂಜಾರ ಸಮಾಜದ ಧರ್ಮಗುರುಗಳಾದ ಮಹಾರಾಷ್ಟ್ರದ ಡಾ. ರಾಮರಾವ್ ಜೀ ಮಹಾರಾಜರು ಪೌರಾದೇವಿ ಇವರ ಸಮ್ಮುಖದಲ್ಲಿ ಬಂಜಾರ ಸಮಾಜದ ಪಾಲ್ಗೊಳ್ಳುವಿಕೆಯಲ್ಲಿ ಪಟ್ಟಾಧಿಕಾರ ಸ್ವೀಕರಿಸಿದ್ದೇನೆ.

ಅದಕ್ಕೆ ಪೂರಕ ದಾಖಲೆಗಳಿವೆ. ಆರೋಪ ಮಾಡುವವರೂ ಸ್ವತಃ ಸಭೆ-ಸಮಾರಂಭ, ಧಾರ್ಮಿಕ ಮತ್ತು ಸಮಾಜದ ಪರವಾದ ಹೋರಾಟಗಳಲ್ಲಿ ನನ್ನ ಸಾನ್ನಿಧ್ಯ-ಸಹಕಾರ ಪಡೆದಿದ್ದಾರೆ. ಸಮಾಜದ ಹೆಸರಿನಲ್ಲಿ ತಮ್ಮ ಬೇಳೆ ಬೇಯಿಸಿಕೊಳ್ಳುತ್ತಿರುವವರು ಮಾಡುತ್ತಿರುವ ಅನ್ಯಾಯದ ವಿರುದ್ಧ ಧ್ವನಿ ಎತ್ತಿದ್ದಕ್ಕೆ ನನ್ನ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಸಮಾಜದ ಸ್ವಾಮೀಜಿ ಅಲ್ಲ ಎಂಬುದನ್ನು ಪಟ್ಟಾಧಿಕಾರದ ಸಂದರ್ಭದಲ್ಲಿದ್ದ ಎಲ್ಲ ನಾಯಕ್, ಡಾವ್, ಕಾರಬಾರಿ ಹಿರಿಯರನ್ನು ಕರೆಯಿಸಿ ಸಾಬೀತುಪಡಿಸಬೇಕು. ಸಮಾಜದ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲದ ಇವರಿಂದ ನಡೆಯುತ್ತಿರುವ ಅಕ್ರಮ-ಅನ್ಯಾಯದ ವಿರುದ್ಧ ತಾವು ಎಂತಹ ಹೋರಾಟ-ತ್ಯಾಗಕ್ಕೂ ಸಿದ್ಧ ಎಂದಿದ್ದಾರೆ.

## ಶ್ರೀಶೈಲದಲ್ಲಿ ಮಲ್ಲಿಕಾರ್ಜುನ ಮಹಾರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾಶಿವರಾತ್ರಿಯ ಅಂಗವಾಗಿ ಆಂಧ್ರಪ್ರದೇಶ ರಾಜ್ಯದ ನಂದ್ಯಾಲ ಜಿಲ್ಲೆಯ ಶ್ರೀಶೈಲದಲ್ಲಿ ಮಲ್ಲಿಕಾರ್ಜುನ ಜಾತ್ರಾಮಹೋತ್ಸವದ ಅಂಗವಾಗಿ ಮಹಾರಥೋತ್ಸವ ಭಕ್ತಜನಸಾಗರದ ಮಧ್ಯೆ ಗುರುವಾರ ವಿಜೃಂಭಣೆಯಿಂದ ಜರುಗಿತು.

ಸಹಸ್ರಾರು ಭಕ್ತರು ರಥೋತ್ಸವಕ್ಕೆ ಉತ್ತತ್ತಿ, ಬಾಳೆಹಣ್ಣು ಎಸೆದು ತಮ್ಮ ಇಷ್ಟಾರ್ಥಗಳನ್ನು ಪೂರೈಸು ಎಂದು ಮಲ್ಲಿಕಾರ್ಜುನನಲ್ಲಿ ಭಕ್ತಿ ಸಮರ್ಪಿಸಿದರು. ಕರ್ನಾಟಕ



ರಾಜ್ಯದ ವಿವಿಧ ಜಿಲ್ಲೆ ಸೇರಿ ಗದಗ ಜಿಲ್ಲೆಯಿಂದಲೂ ಅನೇಕ ಭಕ್ತರು ಪಾಲ್ಗೊಂಡು ರಥೋತ್ಸವದಲ್ಲಿ ಭಾಗಿಯಾಗಿ ಶ್ರೀಶೈಲ ಮಲ್ಲಿಕಾರ್ಜುನನ ಕೃಪೆಗೆ ಪಾತ್ರರಾದರು.

ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಮಾಜಿ ಅಧ್ಯಕ್ಷ ಅಶೋಕ ಮಂದಾಲಿ ಅವರು ಪಾಲ್ಗೊಂಡಿದ್ದರು.

## ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಮಾ. 7 ಕೊನೆಯ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದ ಸಿಪಿಎಚ್‌ಸಿ-ಯುಎಚ್‌ಸಿ ಕಾರ್ಯಕ್ರಮದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ ಜಿಲ್ಲಾ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಸಂಯೋಜಕರ 01-ಹುದ್ದೆಗೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಗದಗ ಇಲ್ಲಿ ದಿನಾಂಕ:13/08/2024 ರಂದು ಅರ್ಜಿ ಆಹ್ವಾನಿಸಲಾಗಿತ್ತು, ಸದರಿ ಹುದ್ದೆಗೆ ಅರ್ಜಿಯೊಂದಿಗೆ ಲಗತ್ತಿಸಿದ ದಾಖಲಾತಿಗಳೊಂದಿಗೆ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಹುದ್ದೆಗೆ ವಿದ್ಯಾರ್ಹತೆ ಹಾಗೂ ಮೆರಿಟ್‌ನ್ನು ಅಳವಡಿಸಿದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಗದಗ ಇವರ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ರಜಾ ದಿನಗಳನ್ನು ಹೊರತು ಪಡಿಸಿ ಮಾರ್ಚ್ 7ರ ಸಂಜೆ 4 ಗಂಟೆಯೊಳಗಾಗಿ ಕಚೇರಿ ಸಮಯದಲ್ಲಿ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಜಿಲ್ಲಾ ಆ.ಕು.ಕ ಅಧಿಕಾರಿಗಳ ಕಚೇರಿಯ ಸೂಚನಾ/ಪ್ರಕಟಣಾ ಫಲಕದಲ್ಲಿ ಪ್ರಕಟಿಸಲಾಗಿದೆ.

# ಕಲಿಕಾ ಹಬ್ಬದಿಂದ ಜ್ಞಾನ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿ ಕನಿಷ್ಠ ಜ್ಞಾನಾರ್ಜನೆ ಬೆಳೆಸುವುದು ಎಫ್‌ಎಲ್‌ಎನ್, ಕಲಿಕಾ ಹಬ್ಬದ ಉದ್ದೇಶ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸಮೀಪದ ಯಲಿಶಿರುಂದ ಕ್ಲಸ್ಟರ್ ಮಟ್ಟದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಶಿರುಂಜ ಪ್ಲಾಟ್‌ನಲ್ಲಿ ಜರುಗಿದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡಿ, 2024/25ನೇ ಸಾಲಿನಲ್ಲಿ ಓದುತ್ತಿರುವ ಎಲ್ಲಾ ಮಕ್ಕಳಲ್ಲಿ ಕಲಿಕೆಯನ್ನು ಗಟ್ಟಿಗೊಳಿಸುವ ಉದ್ದೇಶ ಶಿಕ್ಷಣ ಇಲಾಖೆದ್ದಾಗಿದೆ. ಮಕ್ಕಳಲ್ಲಿ ಕಲಿಕಾ ಬಲವರ್ಧನೆ ಹಾಗೂ ಸಂಖ್ಯಾ ಅಧ್ಯಯನ ಮಾಡುವುದು, ಅಲ್ಲದೇ ಮಕ್ಕಳಲ್ಲಿ ಕನಿಷ್ಠ ಜ್ಞಾನಾರ್ಜನೆಯನ್ನು





ಬೆಳೆಸುವುದು, ಪದಗಳ ಜೋಡಣೆ ಮಾಡಿ ಓದುವುದು ಇತ್ಯಾದಿ ಉದ್ದೇಶಗಳನ್ನು ಹೊಂದಿದ್ದು, ಎಲ್ಲಾ ಮಕ್ಕಳು ಸತತ ಅಭ್ಯಾಸದಲ್ಲಿ ತೊಡಗಿಕೊಂಡು ಉತ್ತಮ ಪ್ರಜೆಗಳಾಗಬೇಕು ಎಂದರು.

ಅಧ್ಯಕ್ಷತೆಯನ್ನು ಮುತ್ತಪ್ಪ ಡಂಬ್ರಳ್ಳಿ ವಹಿಸಿದ್ದರು. ಲಕ್ಷ್ಮೀ ದೇವರಮನಿ, ಬಿ.ಎಫ್. ಪೂಜಾರ, ವಿ.ಎಂ. ಹಿರೇಮಠ, ಆರ್.ಕೆ. ಪವಾರ, ಟಿ.ಎಸ್. ಪವಾರ, ಎಂ.ವಾಯ್. ಮಲಕಶೆಟ್ಟಿ, ವಿ.ಸಿ. ನೆರೆಗಲ್ಲಮಠ, ಬಿ.ವಾಯ್. ಹುಡೆದಮನಿ, ಶಾಲಾ ಪ್ರಧಾನ ಗುರು ಆರ್.ಡಿ. ಜಿನಗಿ, ವಿ.ಆರ್. ಕೆರಿ, ವಿ.ಎಸ್. ಹೊಸಳ್ಳಿ, ಸಿಆರ್‌ಪಿ ಸುವರ್ಣಾ ಚವಡಿ, ಎಸ್.ಆರ್. ಮುಂಡಳಗೇರಿ, ಜಯಶ್ರೀ ಶ್ರೀಗಿರಿ, ಸಿ.ಬಿ. ಪಾಟೀಲ್, ಟಿ.ಠಾಣೆದ, ಚಂದ್ರು ಶಿವಸಿಂಪಗೇರ, ದೇವಪ್ಪ ಕಳಕಣ್ಣವರ, ಅಂಬರೀಶ ಲಕ್ಕಣ್ಣವರ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ಇದ್ದರು.

### ರಾಜೇಶ್ವರಿ ಕಲಾ ಕುಟೀರದ ವಾರ್ಷಿಕೋತ್ಸವ । ಜನಮನ ಸೆಳದ ಸಂಗೀತ-ನೃತ್ಯೋಲ್ಲಾಸ

# ಸಾಂಸ್ಕೃತಿಕ ಸದಭಿರುಚಿಯಿಂದ ಮನೋಲ್ಲಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಗೆ ಬಾಲ್ಯದಲ್ಲಿಯೇ ಸಂಸ್ಕಾರ, ಸಂಸ್ಕೃತಿಯನ್ನು ರೂಢಿಸಬೇಕು. ಸಂಗೀತ, ನೃತ್ಯ ಸಾಂಸ್ಕೃತಿಕ ಸದಭಿರುಚಿಯಿಂದ ಮನಸ್ಸು ಅರಳುವದು ಎಂದು ಗದುಗಿನ ವಿಜಯ ಲಲಿತ ಕಲಾ ಸಂಸ್ಥೆಯ ಅಧ್ಯಕ್ಷ ಅಶೋಕ ಅಕ್ಕಿ ಹೇಳಿದರು.

ಅವರು ನಗರದ ತೋಂಟ-ದ ಸಿದ್ಧಲಿಂಗೇಶ್ವರ ಕಲ್ಯಾಣ ಕೇಂದ್ರದಲ್ಲಿ ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆಯ ಶ್ರೀ ರಾಜೇಶ್ವರಿ ಕಲಾ ಕುಟೀರದ 24ನೇ ವಾರ್ಷಿಕೋತ್ಸವ ಸಮಾರಂಭ, ಸಂಗೀತ ನೃತ್ಯೋಲ್ಲಾಸ-2025, ಮಹಾಶಿವರಾತ್ರಿ ವಿಶೇಷ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಗೀತ, ನೃತ್ಯ, ಚಿತ್ರಕಲೆ ಸಾಂಸ್ಕೃತಿಕ ಸಾಹಿತ್ಯಿಕ ಸಂಘಟನೆಗಳನ್ನು ಕಟ್ಟಿ ಬೆಳೆಸುವದು ಸುಲಭದ



ಮಾತಲ್ಲ. ಸಂಘಟಿಕರ ಸಂಕಟ ಅನುಭವಿಸಿದವರಿಗೇ ಗೊತ್ತು. ಇವು ಲಾಭವನ್ನು ಕೊಡುವುದಿಲ್ಲ. ಆದರೆ ಮಾನಸಿಕ ನೆಮ್ಮದಿ, ಸಂತೃಪ್ತಿಯನ್ನು ನೀಡಬಲ್ಲವು. ಗದಗ ಪರಿಸರದಲ್ಲಿ ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆಯ ಶ್ರೀ ರಾಜೇಶ್ವರಿ ಕಲಾ ಕುಟೀರ ಕಳೆದ 24 ವರ್ಷಗಳಿಂದ ಗದಗ ಪರಿಸರದಲ್ಲಿ ಸಂಗೀತ ಹಾಗೂ ಸಾಂಸ್ಕೃತಿಕ ಪ್ರಜ್ಞೆಯನ್ನು ಮೂಡಿಸುವಲ್ಲಿ ಗಣನೀಯ ಕಾರ್ಯ ಮಾಡಿದೆ ಎಂದರು.

ಅತಿಥಿಯಾಗಿ ಆಗಮಿಸಿದ್ದ ಹಿರಿಯ ಸಾಹಿತಿ, ರಂಗ ನಿರ್ದೇಶಕ ನಿಂಗು ಸೊಲಗಿ ಮಾತನಾಡಿ, ಮಕ್ಕಳಲ್ಲಿರುವ ಸೃಜನಶೀಲತೆಯನ್ನು ಹೊರಹೊಮ್ಮಿಸಲು ಇಂತಹ ಸಂಘಟನೆ, ವೇದಿಗಳು ಅಗತ್ಯ. ಮಕ್ಕಳಲ್ಲಿ ಸಾಂಸ್ಕೃತಿಕ ಪ್ರಜ್ಞೆಯನ್ನು ಮೂಡಿಸಲು ಪಾಲಕ-ಪೋಷಕರೂ ಮುಂದಾಗಬೇಕೆಂದರು.

ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಮಾತನಾಡಿ, ಪ್ರತಿಭೆಯ ವಿಕಸನ ವ್ಯಕ್ತಿತ್ವ ವಿಕಸನವಾಗಿದ್ದು, ಮಕ್ಕಳಿಗೆ ಆಸ್ತಿ ಮಾಡದೇ ಶಿಕ್ಷಣ, ಸಾಂಸ್ಕೃತಿಕ ಕಲೆಗಳಿಂದ ಅವರನ್ನೇ ಆಸ್ತಿಯನ್ನಾಗಿಸಬೇಕೆಂದರು.

ಗಣ್ಯ ಉದ್ಯಮಿ ವಿಜಯಕುಮಾರ ಗಡ್ಡಿ ಮಾತನಾಡಿ, ರಾಜೇಶ್ವರಿ ಕಲಾ ಕುಟೀರಕ್ಕೆ 24 ವರ್ಷವಾದರೂ ಒಂದು ಸೂರು ಇಲ್ಲದಿರುವದು ವಿಷಾದನೀಯ. ಸರ್ಕಾರ, ಸಾಂಸ್ಕೃತಿಕ ಪ್ರಜ್ಞೆಯುಳ್ಳವರು ಇಂತಹ ಸಂಸ್ಥೆ ಭದ್ರವಾಗಿ ನೆಲೆಯೂರಲು ಸಹಕಾರ ನೀಡಬೇಕೆಂದರು.

ಪತ್ರಕರ್ತ, ಹವ್ಯಾಸಿ ಕಲಾವಿದ ಮೌನೇಶ ಬಡಿಗೇರ ಮಾತನಾಡಿ, ದೇಶ ನಾಡು ಸಮೃದ್ಧವಾಗಿರಲು ಸಂಗೀತ, ಸಾಹಿತ್ಯ, ನೃತ್ಯ, ಸಾಂಸ್ಕೃತಿಕ ಕಲೆಗಳು ಜೀವಂತವಾಗಿರಬೇಕು. ಆ ಕಲೆಗಳನ್ನು ಕರಗತ ಮಾಡಿಕೊಳ್ಳುವ ಹಾಗೂ ಪ್ರೋತ್ಸಾಹಿಸುವ ಕಾರ್ಯ ಸಮಾಜ ಸಮುದಾಯದಿಂದ ಆಗಬೇಕಿದೆ. ಈ ಹಿಂದೆ ಈ ಕಲೆಗಳು ರಾಜಾಶ್ರಯದಲ್ಲಿ ಬೆಳೆದು ಬಂದಿದ್ದು, ಇದ್ದುಳ್ಳವರು ಇಂತಹ ಕಲೆಗಳನ್ನು ಪ್ರೋತ್ಸಾಹಿಸಬೇಕು. ಶಿಕ್ಷಣ ಎಷ್ಟು ಮುಖ್ಯವೋ ಮನೋಲ್ಲಾಸಕ್ಕೆ ಸಾಂಸ್ಕೃತಿಕ ಕಲೆಗಳೂ ಅಷ್ಟೇ ಮುಖ್ಯ ಎಂದರು.

ಉಪನ್ಯಾಸಕ ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿ, ಗದುಗಿನ ಸಾಂಸ್ಕೃತಿಕ ಲೋಕಕ್ಕೆ ರಾಜೇಶ್ವರಿ ಕಲಾ ಕುಟೀರ ಅಮೋಘ ಕೊಡುಗೆ ನೀಡಿದೆ. ಪ್ರಾಥಮಿಕ ಹಂತದಿಂದ ಪ್ರೌಢ ಹಂತದವರೆಗೆ ಸಂಗೀತ, ನೃತ್ಯ, ಸಾಂಸ್ಕೃತಿಕ ಕಲೆಗಳನ್ನು ವ್ಯಾಸಂಗ ಮಾಡಿದ ಆಸಕ್ತರು ಮುಂದೆ ಉನ್ನತ ಶಿಕ್ಷಣಕ್ಕೆ ಹೋದಾಗ ಕ್ರಮೇಣ ಆಸಕ್ತಿ ಕಡಿಮೆ ಮಾಡಿಕೊಳ್ಳದೇ ಅದು ನಿರಂತರವಾಗಬೇಕು ಎಂದರು.

ಪೂಜಾ ವೇರ್ಣೇಕರ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಜ್ಯೋತಿ ಹೆರಲಗಿ ನಿರೂಪಿಸಿದರು, ನೃತ್ಯ ನಿರ್ದೇಶಕಿ ಮಾಲಾ ತಂಬ್ರಳ್ಳಿ ವಂದಿಸಿದರು.

ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ರಾಜೇಶ್ವರಿ ಕಲಾ ಕುಟೀರದ ಸಂಸ್ಥಾಪಕ ಅಧ್ಯಕ್ಷ ಗಜಾನನ ವೇರ್ಣೇಕರ, ಕಳೆದ 24 ವರ್ಷಗಳಿಂದ ಗದಗ ಪರಿಸರದಲ್ಲಿ ಸಂಗೀತ, ನೃತ್ಯ, ಸಾಂಸ್ಕೃತಿಕ ಪ್ರಜ್ಞೆ ಮೂಡಿಸುವಲ್ಲಿ ಸಂಸ್ಥೆ ಪರಿಶ್ರಮಿಸಿದೆ. ಕಲಾಭಿಮಾನಿಗಳು, ಚುನಾಯಿತ ಪ್ರತಿನಿಧಿಗಳು ಪ್ರೋತ್ಸಾಹ ಸಹಾಯ ಮಾಡಿದರೆ ಸಂಸ್ಥೆ ಸದೃಢಗೊಂಡು ಇನ್ನೂ ಹೆಚ್ಚಿನ ಕ್ರಿಯಾಶೀಲತೆಯಿಂದ ಕಾರ್ಯ ಮಾಡಲಿದೆ ಎಂದರು.


**Form - IV**

**(See rule 8)**

Statement Showing the Ownership of
**VIJAYA SAKSHI** KANNADA DAILY NEWS PAPER

1) Place of publication : GADAG

Printed at Sai Printing Press and publishers, H.No. 130/154, Balaji Nagar, Gadag. Published at **Vijaya Sakshi,** Near Ring Road, Gadag-582103 Dist: Gadag (Karnataka)

2) Periodicitiy of publication: Daily Morning (Kannada)

3) Printer's Name : **Hussainsab M. Shareefanavar**
(Whether citizen of india)
YES
Address : H.No. 130/154, Balaji Nagar, Near Ring Road, Gadag-582103 Dist: Gadag (Karnataka)

4) Publisher's Name : **Hussainsab M. Shareefanavar**
(Whether citizen of india)
YES
Address : H.No. 130/154, Balaji Nagar, Near Ring Road, Gadag-582103 Dist: Gadag (Karnataka)

5) Editor's Name : **Hussainsab M. Shareefanavar**
(Whether citizen of india)
YES
Address : H.No. 130/154, Balaji Nagar, Near Ring Road, Gadag-582103 Dist: Gadag (Karnataka)

6) Name and address of : **Hussainsab M. Shareefanavar** individual who own the newspaper or printers or in individual Capacity shareholder holding more (Sole Proprietor) than one percent of the H.No. 130/154, Balaji Nagar, Near Ring Road, Gadag-582103 Dist: Gadag (Karnataka)

I **Hussainsab M. Shareefanavar** hereby declare that the particulars given above are true to the best of my knowledge and belief.

Date : 27-02-2025
Place : Gadag

**Hussainsab M. Shareefanavar**
Signature of the Publisher


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka